ಸಂಪಾದಕರು: ರವಿಕುಮಾರ್ ಸಿ.ಹೆಚ್.

RNI: KARKAN/2021/80805

ಓದುಗರ ನೆಚ್ಚಿನ ಕನ್ನಡ ದಿನಪತ್ರಿಕೆ

ಸೂರ್ಯ ಪ್ರಗತಿ

SP NEWS ಡಿಜಿಟಲ್ ನ್ಯೂಸ್ ಕಹಾನಿ

SURYA PRAGATHI Kannada daily

ಪ್ರತಿ ಸುದ್ದಿಯ ಧ್ವನಿ

suryapragathidailynews@gmail.com 9901010109 L2/RNP-1285/TMR/2025-27

Volume: 05 Issue:115 ಸಂಪುಟ: 05 ಸಂಚಿಕೆ: 115 Date:21-05-2026 Thursday RNI NO : KARKAN/2021/80805 L2/RNP-1285/TMR/2025-27 Page :4 ಪುಟ : 4 Price: 1.00 ಬೆಲೆ: 1.00 ರೂ

ತುಮಕೂರಿನ ಅಸ್ಮಿತೆಗೆ ಧಕ್ಕೆಯಿಲ್ಲ ತುಮಕೂರು ಹೆಸರು ಬದಲಾವಣೆ ಕುರಿತು ಸಚಿವ ಪರಮೇಶ್ವರ್ ಸ್ಪಷ್ಟನೆ

ಸೂರ್ಯಪ್ರಗತಿನ್ಯೂಸ್.ಕಾಂ



'ಬೆಂಗಳೂರು ಉತ್ತರ' ವಿವಾದಕ್ಕೆ ತೆರೆ ಎಳೆದ ಪರಮೇಶ್ವರ್: ಬೆಂಗಳೂರು: ರಾಮನಗರ ಜಿಲ್ಲೆಯನ್ನು 'ಬೆಂಗಳೂರು ದಕ್ಷಿಣ' ಎಂದು ಮರುನಾಮಕರಣ ಮಾಡಿದ ಬೆನ್ನಲ್ಲೇ, ಇದೀಗ ತುಮಕೂರು ಜಿಲ್ಲೆಯನ್ನು 'ಬೆಂಗಳೂರು ಉತ್ತರ' ಎಂದು ಮರುನಾಮಕರಣ ಮಾಡುವ ಚರ್ಚೆ ರಾಜ್ಯ ರಾಜಕೀಯ ಮತ್ತು ಸಾಮಾಜಿಕ ವಲಯದಲ್ಲಿ ಭಾರೀ ಚರ್ಚೆಗೆ ಕಾರಣವಾಗಿತ್ತು. ಈ ಹಿನ್ನೆಲೆಯಲ್ಲಿ ಗೃಹ ಸಚಿವ ಹಾಗೂ ತುಮಕೂರು ಜಿಲ್ಲಾ ಉಸ್ತುವಾರಿ ಸಚಿವ ಡಾ. ಜಿ. ಪರಮೇಶ್ವರ್ ಮಹತ್ವದ ಸ್ಪಷ್ಟನೆ ನೀಡಿದ್ದಾರೆ. ಪರಿಣಾಮವಾಗಿ ಉದ್ಯೋಗಾವಕಾಶಗಳು ಹಾಗೂ ಆರ್ಥಿಕ ಚಟುವಟಿಕೆಗಳು ಹೆಚ್ಚಾಗಲಿವೆ ಎಂಬ ನಂಬಿಕೆ ವ್ಯಕ್ತಪಡಿಸಿದರು.

"ಯಾವುದೇ ಕಾರಣಕ್ಕೂ ತುಮಕೂರಿನ ಹೆಸರು, ಗೌರವ ಮತ್ತು ಅಸ್ಮಿತೆಗೆ ಧಕ್ಕೆಯಾಗುವುದಿಲ್ಲ. 'ಕಲ್ಪತರು ನಾಡು' ಎಂಬ ವೈಶಿಷ್ಟ್ಯಪೂರ್ಣ ಗುರುತಿನೊಂದಿಗೆ ತುಮಕೂರು ಮುಂದುವರಿಯುತ್ತದೆ. ಸಾರ್ವಜನಿಕರು ಯಾವುದೇ ತಪ್ಪು ಕಲ್ಪನೆಗೆ ಒಳಗಾಗುವ ಅಗತ್ಯವಿಲ್ಲ" ಎಂದು ಅವರು ಹೇಳಿದರು.

ರಾಮನಗರ ಜಿಲ್ಲೆಯನ್ನು 'ಬೆಂಗಳೂರು ದಕ್ಷಿಣ' ಎಂದು ಮರುನಾಮಕರಣ ಮಾಡಿದ ನಂತರ ರಾಜ್ಯದ ಇತರ ಜಿಲ್ಲೆಗಳ ಹೆಸರು ಬದಲಾವಣೆ ಕುರಿತೂ ಚರ್ಚೆಗಳು ಆರಂಭವಾಗಿದ್ದವು. ಅದರ ಮಧ್ಯೆ ತುಮಕೂರು ಕುರಿತು ಬಂದ ಹೇಳಿಕೆ ಸಾಮಾಜಿಕ ಜಾಲತಾಣಗಳಲ್ಲಿ ತೀವ್ರ ಚರ್ಚೆಗೆ ಕಾರಣವಾಗಿತ್ತು.

ಡಾ. ಪರಮೇಶ್ವರ್ ಅವರ ಈ ಸ್ಪಷ್ಟನೆ ಬಳಿಕ ತುಮಕೂರಿನ ಹೆಸರು ಬದಲಾವಣೆ ಕುರಿತ ಊಹಾಪೋಹಗಳಿಗೆ ತೆರೆ ಬಿದ್ದಂತಾಗಿದೆ.

ಸಚಿವರ ಸ್ಪಷ್ಟನೆ: ತುಮಕೂರಿಗೆ ಸ್ವಂತ ಇತಿಹಾಸ ಮತ್ತು ಸಂಸ್ಕೃತಿ ಇದೆ. ಜಿಲ್ಲೆಯ ಹೆಸರಾಗಲೀ, ವಿಸ್ತೀರ್ಣವಾಗಲೀ ಬದಲಾಗುವುದಿಲ್ಲ ಎಂದು ಗೃಹ ಸಚಿವರು ಅಧಿಕೃತವಾಗಿ ತಿಳಿಸಿದ್ದಾರೆ. ಅಭಿವೃದ್ಧಿ ಪರಿಕಲ್ಪನೆ: ಬೆಂಗಳೂರಿನ ವೇಗದ ಬೆಳವಣಿಗೆಯನ್ನು ಗಮನದಲ್ಲಿಟ್ಟುಕೊಂಡು, ತುಮಕೂರಿನ ಕೈಗಾರಿಕಾ ಮತ್ತು ಆರ್ಥಿಕ ಪ್ರಗತಿಗಾಗಿ 'ಬೆಂಗಳೂರು ಅಭಿವೃದ್ಧಿ ವಲಯ' ದಡಿಯಲ್ಲಿ ಇದನ್ನು ಪರಿಗಣಿಸುವ ಬಗ್ಗೆ ಮಾತ್ರ ಚಿಂತನೆ ನಡೆದಿದೆ.ವಿರೋಧ ಮತ್ತು ಅಭಿಪ್ರಾಯ: ಈ ಹಿಂದೆ ರಾಮನಗರವನ್ನು 'ಬೆಂಗಳೂರು ದಕ್ಷಿಣ' ಎಂದು ಮರುನಾಮಕರಣ ಮಾಡಿದಂತೆ, ತುಮಕೂರಿಗೆ 'ಬೆಂಗಳೂರು ಉತ್ತರ' ಎಂದು ಹೆಸರಿಸುವ ಪ್ರಸ್ತಾವನೆಗಳು ವಿರೋಧಕ್ಕೆ ಕಾರಣವಾಗಿದ್ದವು. ಸಾಹಿತಿಗಳು ಹಾಗೂ ಸ್ಥಳೀಯ ಸಂಘಟನೆಗಳು ತುಮಕೂರು ಜಿಲ್ಲೆಯ ಪ್ರತ್ಯೇಕ ಅಸ್ಮಿತೆ ಹಾಗೂ ಶ್ರೀಮಂತ ಇತಿಹಾಸವನ್ನು ಎತ್ತಿಹಿಡಿದು ಇದನ್ನು ವಿರೋಧಿಸಿದ್ದರು.



ಜನ್ ಭಾಗೀದಾರಿ, ಸಬ್‌ಸೇ ದೂರ್.ಸಪ್ಲೇ ಪೆಹಲೇ IEC ಅಭಿಯಾನಕ್ಕೆ ಚಾಲನೆ

ತುಮಕೂರು ಜಿಲ್ಲೆಯ ಅಪರ ಜಿಲ್ಲಾಧಿಕಾರಿಗಳಾದ ಡಾ ಎನ್ ತಿಪ್ಪೇಸ್ವಾಮಿ ಮಾತನಾಡುತ್ತಾ ಕೇಂದ್ರ &ರಾಜ್ಯ ಸರ್ಕಾರದಗಳ ಸಹಯೋಗದಲ್ಲಿ ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷ ಯೋಜನೆಯಾದ ಆಂ–ಎಲುಗಂ ದರ್ತಿ ಆಭಾ ಜನ್ ಜಾತೀಯಾ ಗ್ರಾಮ ಉತ್ಕರ್ಷ ಅಭಿಯಾನ ಕಾರ್ಯದಡಿ ತುಮಕೂರು ಜಿಲ್ಲೆಯಲ್ಲಿ ಪರಿಶಿಷ್ಟ ಪಂಗಡದ ಜನರು ಹೆಚ್ಚಾಗಿ ವಾಸಿಸುವ 7 ತಾಲ್ಲೂಕುಗಳಲ್ಲಿ 29 ಗ್ರಾಮಗಳು ಆಯ್ಕೆಯಾಗಿದ್ದು, ಈ ಗ್ರಾಮಗಳಲ್ಲಿ ಪರಿಶಿಷ್ಟ ಪಂಗಡದವರಿಗೆ ಕೇಂದ್ರ& ರಾಜ್ಯ ಸರ್ಕಾರದಿಂದ ಸಿಗುವ ಸವಲತ್ತುಗಳನ್ನು ಪಡೆಯಲು 17 ಅಭಿವೃದ್ಧಿ ಇಲಾಖೆಗಳ ಸಹಯೋಗದೊಂದಿಗೆ ಸಮನ್ವಯಸಾಧಿಸಿ ಈ ಎಲ್ಲಾ ಇಲಾಖೆಗಳಲ್ಲಿನ ಕೇಂದ್ರ & ರಾಜ್ಯ ಸರ್ಕಾರದ ಸೌಲಭ್ಯಗಳನ್ನು ಪಡೆಯಲು ಎಲ್ಲಾ 29 ಗ್ರಾಮಗಳಲ್ಲಿ ಅರಿವು ಶಿಬಿರಗಳನ್ನು ಏರ್ಪಡಿಸಿ ಅರಿವು ಮೂಡಿಸುವುದು

ಬೆಂಗಳೂರು ಉತ್ತರ ಜಿಲ್ಲೆ ಪ್ರಸ್ತಾಪ, ತೀವ್ರ ಆಕ್ಷೇಪ, ತುಮಕೂರು ಹೆಸರಿಗೆ ಮಸಿ ಬಳಿಯುವ ಯತ್ನ

ಸೂರ್ಯಪ್ರಗತಿನ್ಯೂಸ್.ಕಾಂ



ತುಮಕೂರು: ನಗರದಲ್ಲಿ ನಡೆದ ಕಾಂಗ್ರೆಸ್ ಸರ್ಕಾರದ ಸಾಧನಾ ಸಮಾವೇಶದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಾ.ಜಿ. ಪರಮೇಶ್ವರ್ ಅವರು ತುಮಕೂರು ಜಿಲ್ಲೆಯನ್ನು ಬೆಂಗಳೂರು ಉತ್ತರ ಜಿಲ್ಲೆ ಎಂದು ಘೋಷಿಸಬೇಕು ಎಂದು ಕೊಟ್ಟ ಕರೆ ಆಘಾತಕಾರಿಯೂ, ರೈತ ವಿರೋಧಿಯೂ, ಜಿಲ್ಲೆಗೆ ಇರುವ ಐತಿಹಾಸಿಕ ಹೆಸರಿಗೆ ಮಸಿ ಬಳಿಯುವ ಕುತಂತ್ರವೂ ಆಗಿದೆ ಎಂದು ಶಾಸಕ ಬಿ. ಸುರೇಶಗೌಡರು ಕಟುವಾಗಿ ಟೀಕಿಸಿದರು.

ಬುಧವಾರ ನಗರದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಇದೇ ಜಿಲ್ಲೆಯಿಂದ ರಾಜಕೀಯವಾಗಿ ಎಲ್ಲವನ್ನೂ ಗಳಿಸಿದ, ಅನೇಕ ಶಿಕ್ಷಣ ಸಂಸ್ಥೆಗಳ ಒಡೆತನ ಹೊಂದಿರುವ ಸಚಿವ ಪರಮೇಶ್ವರ್ ಅವರು ಇದ್ದಕ್ಕಿದ್ದಂತೆ ಈ ಆಗ್ರಹ ಮಾಡಿರುವುದರ ಹಿಂದೆ ಈ ಸರ್ಕಾರದಲ್ಲಿ ಇರುವ ರಿಯಲ್ ಎಸ್ಟೇಟ್ ಹಿತಾಸಕ್ತಿಗಳ ಕೈವಾಡ ಎದ್ದು ಕಾಣುತ್ತದೆ. ಬೆಂಗಳೂರು ನಗರಾಭಿವೃದ್ಧಿ ಸಚಿವರೂ ಆಗಿರುವ ಡಿ.ಕೆ. ಶಿವಕುಮಾರ್ ಅವರು ರಾಮನ ಕಡು ವಿರೋಧಿಯಾಗಿದ್ದು ಅವರು ರಾಮನಗರವನ್ನು ಬೆಂಗಳೂರು ದಕ್ಷಿಣ ಜಿಲ್ಲೆಯ ಎಂದು ಘೋಷಿಸುವಲ್ಲಿ ಅವರಿಗೆ ಇದ್ದ ರಿಯಲ್ ಎಸ್ಟೇಟ್ ಹಿತಾಸಕ್ತಿಯೇ ಕಾರಣವಾಗಿತ್ತು ಎಂದರು.

ತುಂಬೆ ಹೂವಿಗೆ ಪ್ರಸಿದ್ಧವಾಗಿದ್ದ ಕಲ್ಪತರು ನಾಡು ಎನಿಸಿರುವ ತುಮಕೂರು ಇಲ್ಲಿನ ಜಗತ್ಪ್ರಸಿದ್ಧ ಸಿದ್ಧಗಂಗಾ ಮಠ, ಶಿವಗಂಗೆ ಬೆಟ್ಟ, ದೇವರಾಯನದುರ್ಗ, ಗೂಳೂರು ಮುಂತಾದ ಐತಿಹಾಸಿಕ ದೇವಾಲಯಗಳಿಂದ ಪ್ರಸಿದ್ಧವಾಗಿದೆ. ಇಂಥ ಜಿಲ್ಲೆಯ ಹೆಸರನ್ನು ಬೆಂಗಳೂರು ಉತ್ತರ ಜಿಲ್ಲೆ ಎಂದು ಕರೆದರೆ ಈ ಎಲ್ಲ ಚರಿತ್ರೆಯನ್ನು ಅಳಿಸಿ ಹೋಗುತ್ತದೆ, ಇತಿಹಾಸ ಮರೆಮಾಚಿದಂತಾಗುತ್ತದೆ. ಬೆಂಗಳೂರು ಉತ್ತರ ಜಿಲ್ಲೆ ಎಂದು ಘೋಷಿಸುವ ಮೂಲಕ ತುಮಕೂರಿನ ಪರಿಸರದ ಕೃಷಿ ಕ್ಷೇತ್ರಕ್ಕೆ ತೀವ್ರ ಏಟು ಬೀಳುತ್ತದೆ. ನಗರೀಕರಣ ಎಂದರೆ ಜನರನ್ನು ಗುಳೆ ಎಬ್ಬಿಸುವುದು ಮೊದಲ ಕೆಲಸ. ಅಲ್ಲಿ ಕಟ್ಟಡ, ಮಾಲ್ ಬಂದು ಕೃಷಿ ಯೋಗ್ಯ ಭೂಮಿ ನಾಶವಾಗುತ್ತದೆ. ಕರ್ನಾಟಕವು ರೈತರ ಆತ್ಮಹತ್ಯೆಯಲ್ಲಿ ಈಗಾಗಲೇ ದೇಶದಲ್ಲಿ ಎರಡನೇ ಸ್ಥಾನದಲ್ಲಿ ಇದೆ. ಅದನ್ನು ಒಂದನೇ ಸ್ಥಾನಕ್ಕೆ ಏರಿಸುವುದು ಇವರೆಲ್ಲರ ಉದ್ದೇಶವೇ ಎಂದು ಸುರೇಶ್‌ಗೌಡರು ಪ್ರಶ್ನಿಸಿದರು.

ದಿಕ್ಕು ದೆಸೆಯಿಲ್ಲದ ಬೆಂಗಳೂರು ಈಗಾಗಲೇ ಸಂಚಾರ ದಟ್ಟಣೆ, ಗುಂಡಿ ತುಂಬಿದ ರಸ್ತೆಗಳು, ಸಾರ್ವಜನಿಕ ಸಾರಿಗೆ ವ್ಯವಸ್ಥೆಯ ತೀವ್ರ ಕೊರತೆಯಿಂದ ನರಳುತ್ತಿದೆ. ಒಂದು ಕಾಲದಲ್ಲಿ ಪಿಂಚಣಿದಾರರ ಸ್ವರ್ಗ ಎನಿಸಿದ್ದ ಬೆಂಗಳೂರು ಈಗ ಕಾಂಕ್ರೀಟ್ ಕಾಡು ಎನಿಸಿದೆ. ಹೀಗಾಗಿ ತನ್ನ ಭಾರದಲ್ಲಿ ತಾನೇ ಕುಸಿಯುತ್ತಿರುವ ಬೆಂಗಳೂರಿಗೆ ದಕ್ಷಿಣದಲ್ಲಿ ರಾಮನಗರ ಮತ್ತು ಉತ್ತರದಲ್ಲಿ ತುಮಕೂರು ಸೇರಿಸಿ ಈ ಸರ್ಕಾರ ಏನು ಮಾಡಲು ಹೊರಟಿದೆ? ಇಂಥ ಪ್ರಕಟಣೆಗಳನ್ನು ಅಥವಾ ಆಗ್ರಹಗಳನ್ನು ದಿಢೀರ್ ಎಂದು ಮಾಡುವುದಕ್ಕಿಂತ ಮುಂಚೆ ಅದರ ಸಾಧಕ ಬಾಧಕಗಳನ್ನು ತಜ್ಞರ ಜತೆ ಚರ್ಚಿಸಬೇಕು. ತಮಗೆ ಪ್ರತಿಸ್ಪರ್ಧಿಯಾಗಿರುವ ಪರಮೇಶ್ವರ್ ಅವರನ್ನು ಸಂತುಷ್ಟಗೊಳಿಸಲು ಶಿವಕುಮಾರ್ ಅವರೇನಾದರೂ ಒಂದು ವೇಳೆ ಒಪ್ಪಿಕೊಂಡರೆ ನಮ್ಮ ತುಮಕೂರಿನ ಜನರ ಗತಿ ಅಧೋಗತಿಯಾಗುವುದರಲ್ಲಿ ಯಾವುದೇ ಸಂಶಯವಿಲ್ಲ ಎಂದು ಸುರೇಶ ಗೌಡರು ಎಚ್ಚರಿಸಿದರು.

ಹಾಗೆಂದು ತುಮಕೂರು ಅಭಿವೃದ್ಧಿಯಾಗಬಾರದು ಎನ್ನುವುದು ನಮ್ಮ ನಿಲುವು ಅಲ್ಲ. ತುಮಕೂರಿಗೆ ಏನೇನು ಬರಬೇಕೋ ಅದೆಲ್ಲವೂ ಬರಬೇಕು. ಅದನ್ನು ಹೆಸರು ಬದಲಿಸಿ ತರುತ್ತೇವೆ ಎನ್ನುವುದು ಸರ್ಕಾರದ ಹೊಣೆಗೇಡಿತನಕ್ಕೆ ಸಾಕ್ಷಿಯಾಗಿದ್ದು ಕುಣಿಯಲು ಬಾರದವರು ನೆಲ ಡೊಂಕು ಎಂದಂತೆ ಎಂದು ಅವರು ವ್ಯಂಗ್ಯವಾಡಿದರು.

ತುಮಕೂರು ನಗರ ಶಾಸಕ ಜಿ.ಬಿ. ಜ್ಯೋತಿಗಣೇಶ್ ಮಾತನಾಡಿ, ತುಮಕೂರಿಗೆ ಅದರದ್ದೇ ಆದ ಅಸ್ಮಿತೆ ಇದೆ. ತುಮಕೂರನ್ನು ಬೆಂಗಳೂರು ಉತ್ತರ ಜಿಲ್ಲೆ ಮಾಡಿದರೆ ಇಲ್ಲಿನ ಇತಿಹಾಸ, ಪರಂಪರೆಗೆ ಪೆಟ್ಟು ಬೀಳುತ್ತದೆ. ಇಲ್ಲಿನ ಜನಜೀವನ ಶೈಲಿ ಹದಗೆಡುತ್ತದೆ. ತುಮಕೂರನ್ನು ರಿಯಲ್ ಎಸ್ಟೇಟ್‌ಗೆ ಬಲಿ ಕೊಡಬಾರದು ಎಂದು ಒತ್ತಾಯಿಸಿದರು. ತುಮಕೂರು ಜಿಲ್ಲೆಯಲ್ಲಿ ನಮ್ಮತನ ಉಳಿಸಿಕೊಂಡು ಹೋಗಬೇಕು. ಸಚಿವ ಡಾ. ಪರಮೇಶ್ವರ್ ಅವರಿಗೆ ಜಿಲ್ಲೆಯ ಅಭಿವೃದ್ಧಿ ಬಗ್ಗೆ ಅಷ್ಟೊಂದು ಕಾಳಜಿ ಇದ್ದರೆ ತುಮಕೂರು ಜಿಲ್ಲೆ ಹೆಸರು ಉಳಿಸಿಕೊಂಡು ಅಭಿವೃದ್ಧಿ ಮಾಡಲಿ, ಜಿಲ್ಲೆಯ ಇತಿಹಾಸ, ಸಾಂಸ್ಕೃತಿಕ ಮಹತ್ವಕ್ಕೆ ಧಕ್ಕೆ ಮಾಡುವುದು ಬೇಡ. ತುಮಕೂರನ್ನು ಬೆಂಗಳೂರು ಉತ್ತರ ಜಿಲ್ಲೆ ಮಾಡುವುದಕ್ಕೆ ತಮ್ಮ ತೀವ್ರ ವಿರೋಧವಿದೆ ಎಂದು ಹೇಳಿದರು.

ಜಿಲ್ಲಾ ಬಿಜೆಪಿ ಅಧ್ಯಕ್ಷ ಎಚ್.ಎಸ್. ರವಿಶಂಕರ್ ಹೆಬ್ಬಾಕ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಟಿ.ಹೆಚ್. ಹನುಮಂತರಾಜು, ನಗರ ಅಧ್ಯಕ್ಷ ಧನುಷ್, ಮುಖಂಡರಾದ ಪ್ರಭಾಕರ್, ವಸಂತಮ್ಮ, ಜೆ. ಜಗದೀಶ್, ಮರಿತಿಮ್ಮಯ್ಯ ಹಾಜರಿದ್ದರು.

ಅಧಿಕಾರ ಜನಸೇವೆ ಮಾಡಲು ಕೊಟ್ಟ ವರ ನ್ಯಾ.ನೂರುನ್ನೀಸಾ

ಸೂರ್ಯಪ್ರಗತಿನ್ಯೂಸ್.ಕಾಂ



ತುಮಕೂರು:ಅಧಿಕಾರ ಎಲ್ಲರಿಗೂ ಸಿಗುವಂತಹುದಲ್ಲ, ಆದರೆ ಸಿಕ್ಕ ಅಧಿಕಾರವನ್ನು ಸದುಪಯೋಗಪಡಿಸಿಕೊಳ್ಳುವುದರ ಜೊತೆಗೆ ಜನರ ಸಮಸ್ಯೆಗಳಿಗೆ ಸ್ಪಂದಿಸಬೇಕು. ಇದು ನನಗೆ ದೇವರು ಕೊಟ್ಟ ವರ ಎಂದು ಭಾವಿಸಬೇಕು. ಆಗ ಮಾತ್ರ ಅಧಿಕಾರದಲ್ಲಿರುವವರು ಸದಾ ಜನರ ಸಮಸ್ಯೆಗಳಿಗೆ ಸ್ಪಂದಿಸಲು ಸಾಧ್ಯವಾಗುತ್ತದೆ ಎಂದು ಜಿಲ್ಲೆಯಿಂದ ವರ್ಗಾವಣೆಗೊಂಡಿರುವ ತುಮಕೂರು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು, ಹಿರಿಯ ಸಿವಿಲ್ ನ್ಯಾಯಾಧೀಶರಾದ ನೂರುನ್ನೀಸಾ ತಿಳಿಸಿದರು.

ತುಮಕೂರಿನ ವರದಕ್ಷಿಣೆ ವಿರೋಧಿ ವೇದಿಕೆ– ಸಾಂತ್ವನ ಕೇಂದ್ರದ ಕಾರ್ಯಾಲಯದಲ್ಲಿ ಆಯೋಜಿಸಿದ್ದ ಸರಳ ಬೀಳ್ಕೊಡುಗೆ ಹಾಗೂ ಸನ್ಮಾನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ಯಾರೇ ಆಗಲಿ ತಮಗೆ ಸಿಕ್ಕ ಅಪರೂಪದ ಅಧಿಕಾರವನ್ನು ಸಮಾಜದ ಒಳಿತಿಗೆ ಬಳಸಿಕೊಳ್ಳಬೇಕು. ಈ ಸಮಾಜಕ್ಕೆ ನನ್ನ ಕೊಡುಗೆ ಏನು ಎಂದು ಚಿಂತಿಸಬೇಕು. ಏಕೆಂದರೆ ಲಕ್ಷಾಂತರ ಜನ ಉದ್ಯೋಗವಿಲ್ಲದೆ, ಅವಕಾಶಗಳಿಲ್ಲದೆ ಇರುವಾಗ ಅವಕಾಶವಂಚಿತರ ಬಗ್ಗೆ, ನೊಂದವರ ಬಗ್ಗೆ, ಅನ್ಯಾಯಕ್ಕೆ ಒಳಗಾದವರ ಬಗ್ಗೆ ನಾವು ಸ್ಪಂದಿಸಿದಾಗ ಅವರ ಸಮಸ್ಯೆಗಳೂ ನಿವಾರಣೆಯಾಗುತ್ತವೆ. ಸಮಾಜವೂ ಸುಸ್ಥಿತಿಯಲ್ಲಿರುತ್ತದೆ ಎಂದರು.

ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಯಾಗಿ ತುಮಕೂರಿಗೆ ಬರುವುದಕ್ಕೂ ಮುನ್ನ ತಿಪಟೂರಿನಲ್ಲಿ ನ್ಯಾಯಾಧೀಶಳಾಗಿ ಕಾರ್ಯ ನಿರ್ವಹಿಸಿದ್ದೆ. ಕಾನೂನು ಸೇವೆಗಳ ಪ್ರಾಧಿಕಾರದ ಜವಾಬ್ದಾರಿ ವಹಿಸಿಕೊಂಡಾಗ ಜನರ ನೋವು ನಲಿವುಗಳನ್ನು ಇನ್ನಷ್ಟು ತಿಳಿಯಲು ಸಹಕಾರಿಯಾಯಿತು. ಮಹಿಳೆಯರು, ಮಕ್ಕಳು, ಅಶಕ್ತರು, ಭಿಕ್ಷಾಟನೆಯಲ್ಲಿ ತೊಡಗಿರುವವರು, ಹೊಟ್ಟೆಪಾಡಿಗೆ ರಸ್ತೆ ಬದಿ ಕೆಲಸ ಮಾಡುವವರು, ಬಾಲ ಕಾರ್ಮಿಕರು, ಅಪರಾಧಕ್ಕೊಳಗಾಗಿ ಜೈಲಿನಲ್ಲಿ ಇರುವವರು ಇವರೆಲ್ಲರ ಸಮಸ್ಯೆ ಆಲಿಸುವ ಜೊತೆಗೆ ಗ್ರಾಮೀಣ ಪ್ರದೇಶಗಳಲ್ಲಿ ಕಾನೂನು ಅರಿವು ಮೂಡಿಸುವ ಕಾರ್ಯಕ್ರಮಗಳು ಹೆಚ್ಚು ತೃಪ್ತಿ ತಂದಿವೆ. ಈ ಜಿಲ್ಲೆಯ ಜನ ಶಾಂತ ಸ್ವಭಾವದವರು ಒಳ್ಳೆಯ ವಾತಾವರಣ ಇಲ್ಲಿದೆ. ಇಲ್ಲಿನ ಸಂಘ ಸಂಸ್ಥೆಗಳು ಉತ್ತಮವಾಗಿ ಕಾರ್ಯನಿರ್ವಹಿಸುತ್ತಿವೆ. ಸಿದ್ಧಗಂಗಾ ಸ್ವಾಮೀಜಿಗಳಂತಹ ಪುಣ್ಯ ಪುರುಷರು ಈ ಕಲ್ಪತರು ನಾಡಿನ ಹೆಸರನ್ನು ಮೇಲೆತ್ತರಕ್ಕೆ ಕೊಂಡು ಹೋಗಿದ್ದಾರೆ. ಅಂತಹ ಹಿರಿಯರ ಆಶೀರ್ವಾದ ನಮ್ಮೆಲ್ಲರ ಮೇಲಿರಲಿ ಎಂದರು.

ಅಧಿಕಾರದಲ್ಲಿ ಇದ್ದಾಗ ನಮ್ಮ ಕೆಲಸ ಮಾಡಿ ಮುಗಿಸುವುದಷ್ಟೇ ಮುಖ್ಯವಲ್ಲ. ನಾನು ಸರಿಯಾದ ಕೆಲಸ ಮಾಡಿದ್ದೇನೆಯೇ ಎಂದು ಪ್ರತಿದಿನ ರಾತ್ರಿ ಒಮ್ಮೆ ಅವಲೋಕನ ಮಾಡಬೇಕು. ನಮಗೆ ಒಂದು ಸಂವಿಧಾನ ಇದೆ, ಕಾನೂನುಗಳಿವೆ. ಅವುಗಳ ರಕ್ಷಣೆಯಾಗುತ್ತಿದೆಯೇ ಎಂದು ನೋಡಬೇಕು. ಎಲ್ಲರೂ ಕಾನೂನಿನ ಚೌಕಟ್ಟಿನಲ್ಲಿ ಕೆಲಸ ಮಾಡುವ ರೀತಿಯಲ್ಲಿ ನೋಡಿಕೊಳ್ಳಬೇಕು. ಇದರ ಜೊತೆಗೆ ಒಂದಷ್ಟು ಮಾನವೀಯತೆಯೂ ಇರಬೇಕು. ಅಂತಹ ಸ್ವಭಾವ ನನ್ನದಾಗಿತ್ತು. ನಾನು ಅದೇ ಹಾದಿಯಲ್ಲಿ ನಡೆದಿದ್ದೇನೆ ಎಂಬ ತೃಪ್ತಿ ಇದೆ ಎಂದರು.


ಲೇಖಕಿ, ವರದಕ್ಷಿಣೆ ವಿರೋಧಿ ವೇದಿಕೆ ಉಪಾಧ್ಯಕ್ಷೆ ಬಾ.ಹ. ರಮಾಕುಮಾರಿ ಮಾತನಾಡಿ ಕಾನೂನು ಅರಿವು ಕಾರ್ಯಕ್ರಮಗಳ ಜೊತೆ ಜೊತೆಗೆ ಸಾಮಾಜಿಕ ಸಮಸ್ಯೆಗಳ ಕಡೆಗೆ ಸ್ಪಂದಿಸುವ ಕಾರ್ಯವನ್ನೂ ಪ್ರಾಧಿಕಾರದ ಕಾರ್ಯದರ್ಶಿಗಳಾಗಿ ನಿಭಾಯಿಸಿದ್ದು ಹೆಚ್ಚು ಗಮನಸೆಳೆದಿದೆ. ಮಹಿಳೆಯರ ಅನೇಕ ಕಷ್ಟದ ಸಮಸ್ಯೆಗಳಿಗೆ ಸ್ಪಂದಿಸಿ ಅವರಿಗೆ ಮಾರ್ಗದರ್ಶನ ನೀಡಿದ್ದಾರೆ. ವಿವಾಹ ವಿಚ್ಛೇದನದ ಪ್ರಕರಣಗಳಲ್ಲಿ ಅವರಿಗೆ ತಿಳುವಳಿಕೆ ನೀಡಿ ದಂಪತಿಗಳನ್ನು ಒಂದುಗೂಡಿಸಿದ್ದಾರೆ. ಶಾಲೆ ಬಿಟ್ಟು ಹೊರಗುಳಿದ ಮಕ್ಕಳ ಬಗ್ಗೆಯೂ ಗಮನ ಹರಿಸಿದ್ದಾರೆ. ಲೈಂಗಿಕ ದೌರ್ಜನ್ಯಕ್ಕೆ ಒಳಗಾದ ಬಾಲಕಿ ಮತ್ತು ಅವರ ಕುಟುಂಬದವರ ಜೊತೆ ಮಾತನಾಡಿ ಅವರ ಸಂಕಷ್ಟಗಳಿಗೆ ಸ್ಪಂದಿಸಿದ್ದಾರೆ. ಇಂತಹ ಹಲವಾರು ಸ್ಪಂದನೆಯ ಮನಸ್ಸಿನಿಂದಲೇ ಜಿಲ್ಲೆಯಲ್ಲಿ ಒಂದು ಉತ್ತಮ ಹೆಸರು ಸಂಪಾದಿಸಿದ್ದಾರೆ. ನೊಂದವರ ಬಗ್ಗೆ ತೋರಿಸುವ ಕಾಳಜಿ ಮತ್ತು ಅಂತಹ ಮನೋಗುಣ ಎಲ್ಲರಿಗೂ ಇರುವುದಿಲ್ಲ. ಇಂತಹ ಮನಸ್ಥಿತಿ ಇರುವವರು ಇನ್ನೂ ಎತ್ತರದ ಹುದ್ದೆಗೆ ಹೋಗಿ ಉಚ್ಚ ನ್ಯಾಯಾಲಯದಲ್ಲಿ ನ್ಯಾಯಮೂರ್ತಿಗಳಾಗಿ ಕಾರ್ಯನಿರ್ವಹಿಸುವಂತಾಗಲಿ ಎಂದು ಆಶಿಸಿದರು.

ವರದಕ್ಷಿಣೆ ವಿರೋಧಿ ವೇದಿಕೆ ಪ್ರಧಾನ ಕಾರ್ಯದರ್ಶಿ ಸಾ.ಚಿ.ರಾಜಕುಮಾರ ಮಾತನಾಡಿ ಈ ವೇದಿಕೆ ಪ್ರಾರಂಭವಾಗಿದ್ದೇ 1992 ರಲ್ಲಿ ಇಲ್ಲಿನ ಕಾನೂನು ಕಾಲೇಜಿನ ಕಾನೂನು ವಿದ್ಯಾರ್ಥಿಗಳಿಂದ, ವೇದಿಕೆಯ ಅರಂಭದ ದಿನಗಳಲ್ಲಿ ಮಹಿಳೆಯರ ಸಾವು ನೋವಿನ ವಿರುದ್ಧ ಹೋರಾಟ ಮಾಡುತ್ತಿದ್ದ ವೇದಿಕೆ ಬೃಹತ್ ಪ್ರತಿಭಟನೆ ನಡೆಸುತ್ತಿತ್ತು. ಸಮಾವೇಶಗಳನ್ನು ನಡೆಸುತ್ತಿತ್ತು. ಉಚ್ಚ ನ್ಯಾಯಾಲಯದ ನ್ಯಾಯಮೂರ್ತಿಗಳನ್ನು ವಿಚಾರ ಘೋಷ್ಠಿಗಳಿಗೆ ಕರೆಯಿಸಿ ಉಪನ್ಯಾಸ ಕೊಡಿಸಲಾಗುತ್ತಿತ್ತು. ವೇದಿಕೆಯ ಈ ಕಾರ್ಯಚಟುವಟಿಕೆಗಳನ್ನು ಗಮನಿಸಿ ಕಾನೂನು ಸೇವೆಗಳ ಪ್ರಾಧಿಕಾರದ ಅರಿವು ಕಾರ್ಯಕ್ರಮಗಳಿಗೆ

ತುಮಕೂರಿನಲ್ಲಿ ಮತ್ತೆ ತಲೆ ಎತ್ತುತಿದೆಯೇ ಬಡ್ಡಿದಂದೆ ಕೋರರ ಹಾವಳಿ..?

ಸೂರ್ಯಪ್ರಗತಿನ್ಯೂಸ್.ಕಾಂ

ವರದಿ: ಎ.ಎನ್.ಪೀರ್



ಐವರ ವಿರುದ್ಧ ಕ್ರಮ ಕೈ ಗೊಳ್ಳುವಂತೆ ಜಿಲ್ಲಾ ಪೊಲೀಸ್ ವರಿಷ್ಟಧಿಕಾರಿಗಳ ಕಾರ್ಯಾಲಯ ಹಾಗು ತಿಲಕ್ ಪಾರ್ಕ್ ಪೊಲೀಸ್ ಠಾಣೆಗೆ ದೂರು

ಇತ್ತೀಚಿಗೆ ತುಮಕೂರಿನಲ್ಲಿ ಕೆಲವು ಬಡ್ಡಿದಂದೆ ಕೋರರು ಯುವಕರನ್ನೇ ಟಾರ್ಗೆಟ್ ಮಾಡಿ ವಾಹನದ ಮಾಲೀಕರು ಇಲ್ಲದಿದ್ದರು ಯುವಕರ ಬಳಿ ವಾಹನಗಳನ್ನು ಅಡವಿಟ್ಟು ಕೊಂಡು ನಂತರ ಅಧಿಕ ಬಡ್ಡಿ ಹಾಗು ಹಣ ನೀಡುವಂತೆ ಹಿಂಸೆ ಕೊಟ್ಟಿರುವುದು ತಡವಾಗಿ ಬೆಳಕಿಗೆ ಬಂದಿದೆ.

ಇನ್ನು ಈ ಬಡ್ಡಿ ದಂದೆಯಾ ವಿಚಾರ ನಮಗೆ ಗೊತ್ತಿಲದ ಹಾಗೆ ನಡೆಸಿದ್ದರೆ ಎಂದು ಪೋಷಕರು ಆರೋಪಿಸಿದ್ದು ಬಡ್ಡಿ ದಂದೆ ಕೋರರು ಅನಧಿಕೃತವಾಗಿ ಬಡ್ಡಿ ವ್ಯವಹಾರ ನಡೆಸಿ ಮಗನಿಗೆ ಹಿಂಸೆ ಕೊಟ್ಟಿದ್ದರೆ ಎಂದು ಹಾಗು ಬಡ್ಡಿ ಹಣ ವಸೂಲಿ ಮಾಡಲು ಇನ್ನು ಕೆಲವರು ತಮ್ಮ ಮಗನಿಗೆ ಅವ್ಯಚ ಶಬ್ದಗಳಿಂದ ನಿಂದಿಸಿ ಹಾಗು ಮನೆಯ ಬಳಿ ಬಂದು ಪೋಷಕರಿಗೆ ಹಣಕೊಡುವಂತೆ ಬೆದರಿಕೆ ಹಾಕಿ ಮನೆಯ ಬಳಿ ಹಾಗು ಹೊರಗೆ ಮಾನ ಹಾನಿ ಮಾಡಿದ್ದರೆ ಮತ್ತು ಆಟೋ ಮಾಲೀಕನ ಮಗನು ಕೂಡ ನನ್ನ ಮಗನನ್ನು ಬಡ್ಡಿ ದಂದೆಗೆ ಸಿಲುಕಿಸಿ ನಂತರ ಇವನು ಕೂಡ ಇವರ ಜೊತೆ ಶಾಮಿಲಾಗಿ ಇಲ್ಲ ಸಲ್ಲದ ಸುಳ್ಳು ಆರೋಪಗಳನ್ನು ಹೊರೆಸಿ ಹಾಗು ನಮ್ಮ ಮಗನನ್ನು ಇವರೇ ಕೆಟ್ಟ ದಾರಿಗೆ ತೆಗೆದುಕೊಂಡು ಹೋಗಿದ್ದಾರೆ ಎಂದು ಆರೋಪಿಸಿ ಐವರ ವಿರುದ್ಧ ಕಾನೂನು ಕ್ರಮ ಕೈ ಗೊಂಡು ನ್ಯಾಯ ಕೊಡಬೇಕೆಂದು ತಿಲಕ್ ಪಾರ್ಕ್ ಪೊಲೀಸ್ ಠಾಣೆಗೆ ದೂರು ನೀಡಿದ್ದು

ಪೊಲೀಸ್ ಅಧಿಕಾರಿಗಳು ತನಿಖೆ ನಡೆಸಿ ಸಂಬಂಧ ಪಟ್ಟವರ ವಿರುದ್ಧ ಕ್ರಮ ಜರುಗಿಸಿ ನ್ಯಾಯ ಕೊಡಿಸುವುದಾಗಿ ಭರವಸೆ ನೀಡಿದ್ದಾರೆ

ಇನ್ನು ಕೆಲವರ ಮೇಲೆ ಮಾನನಷ್ಟ ಮೊಕದ್ದಮೆ ಉಡುವುದಾಗಿ ಪೋಷಕರು ತಿಳಿಸಿದ್ದಾರೆ

ಏನೇ ಇರಲಿ ನಿಂತು ಹೋಗಿದ್ದ ಬಡ್ಡಿ ದಂದೆ, ಮತ್ತೆ ಇಂತಹ ಘಟನೆ ಗಳು ನಡೆಯದಂತೆ ಪೊಲೀಸ್ ಇಲಾಖೆ ಅಧಿಕಾರಿಗಳು ಬಡ್ಡಿ ಕೋರರ ವಿರುದ್ಧ ಕಠಿಣ ಕಾನೂನು ಕ್ರಮ ಕೈ ಗೊಂಡಿದ್ದರು

ಮತ್ತೆ ತೆರೆ – ಮರೆ ಯಲ್ಲಿ ಇಂತಹ ಬಡ್ಡಿ ದಂದೆ ಕೋರರು ಕಾಣಿಸುತಿದ್ದು ಇಂತವರ ವಿರುದ್ಧ ಕ್ರಮ ಕೈ ಗೊಂಡು ಮತ್ತೆ ಇಂತಹ ಬಡ್ಡಿ ದಂದೆ ನಡೆಸುವವರಿಗೆ ತಕ್ಕ ಪಾಠ ಕಲಿಸಬೇಕಾಗಿದೆ ಪೊಲೀಸ್ ಇಲಾಖೆ ಕ್ರಮ ಕೈ ಗೊಳ್ಳದಿದ್ದರೆ ಪೋಷಕರು ಕಣ್ಣೀರಿನಲ್ಲಿ ಕೈ ತೊಳೆಯುವ ಪರಿಸ್ಥಿತಿ ನಿರ್ಮಾಣವಾಗುತ್ತದೆ

ಕೊರಟಗೆರೆ ತಹಸೀಲ್ದಾರ್ ಮಂಜುನಾಥ್‌ಗೆ ರಾಜ್ಯ ಮಟ್ಟದ ಪ್ರಶಸ್ತಿ: ಸಿಎಂ ಸಿದ್ದರಾಮಯ್ಯ ಪ್ರದಾನ

ಸೂರ್ಯಪ್ರಗತಿನ್ಯೂಸ್.ಕಾಂ



ಕೊರಟಗೆರೆ*:–ತುಮಕೂರಿನಲ್ಲಿ ಮಂಗಳವಾರ ನಡೆದ ಸಾಧನಾ ಸಮಾವೇಶದಲ್ಲಿ ಕೊರಟಗೆರೆ ತಹಸೀಲ್ದಾರ್ ಮಂಜುನಾಥ್ ಅವರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ರಾಜ್ಯಮಟ್ಟದ ಪ್ರಶಸ್ತಿ ಪ್ರದಾನ ಮಾಡಿದರು.

ಕಂದಾಯ ಇಲಾಖೆಯಲ್ಲಿ ಅತ್ಯುತ್ತಮ ಸೇವೆ ಸಲ್ಲಿಸಿದ ಹಾಗೂ ಜನಪರ ಆಡಳಿತಕ್ಕಾಗಿ ಮಂಜುನಾಥ್ ದಂಡಾಧಿಕಾರಿಗಳನ್ನು ಈ ಪ್ರತಿಷ್ಠಿತ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ. ಕೊರಟಗೆರೆ ತಾಲ್ಲೂಕಿನಲ್ಲಿ ಸಾರ್ವಜನಿಕರ ಕುಂದುಕೊರತೆಗಳಿಗೆ ತ್ವರಿತ ಸ್ಪಂದನೆ, ಪಾರದರ್ಶಕ ಆಡಳಿತ ಹಾಗೂ ಸರ್ಕಾರಿ ಯೋಜನೆಗಳ ಸಮರ್ಪಕ ಅನುಷ್ಠಾನಕ್ಕಾಗಿ ಅವರ ಕಾರ್ಯವನ್ನು ಗುರುತಿಸಿ ಸನ್ಮಾನಿಸಲಾಗಿದೆ. ಸಮಾವೇಶದಲ್ಲಿ ಉಪ ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಹಾಗೂ ಗೃಹ ಸಚಿವ ಡಾ.ಜಿ.ಪರಮೇಶ್ವರ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು. ಪ್ರಶಸ್ತಿ ಸ್ವೀಕರಿಸಿದ ತಹಸೀಲ್ದಾರ್ ಮಂಜುನಾಥ್ ಅವರು ಮಾತನಾಡಿ, ಈ ಪ್ರಶಸ್ತಿ ತಾಲ್ಲೂಕಿನ ಎಲ್ಲ ಸಿಬ್ಬಂದಿ ಹಾಗೂ ಜನತೆಗೆ ಸಲ್ಲುತ್ತದೆ. ಇನ್ನಷ್ಟು ಉತ್ಸಾಹದಿಂದ ಜನಸೇವೆ ಮಾಡಲು ಪ್ರೇರಣೆ ಸಿಕ್ಕಿದೆ ಎಂದು ಹೇಳಿದರು.

ತಹಸೀಲ್ದಾರ್‌ಗೆ ರಾಜ್ಯಮಟ್ಟದ ಪ್ರಶಸ್ತಿ ಲಭಿಸಿರುವುದಕ್ಕೆ ತಾಲ್ಲೂಕಿನ ಜನಪ್ರತಿನಿಧಿಗಳು, ಅಧಿಕಾರಿ ವರ್ಗ ಹಾಗೂ ಸಾರ್ವಜನಿಕರು ಹರ್ಷ ವ್ಯಕ್ತಪಡಿಸಿ ಅಭಿನಂದಿಸಿದ್ದಾರೆ.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ

ಸರ್ಕಾರಿ ಗೋಮಾಳದ ಜಮೀನಿಗೆ ಅಕ್ರಮವಾಗಿ ಖಾತೆ ಮಾಡಿರುವುದನ್ನು ವಿರೋಧಿಸಿ ಎಸಿಗೆ ಮನವಿ

ಸೂರ್ಯಪ್ರಗತಿನ್ಯೂಸ್.ಕಾಂ

ಮಧುಗಿರಿ: ತಾಲೂಕಿನ ಕೊಡಿಗೇನಹಳ್ಳಿ ಹೋಬಳಿ ಅಡವಿನಾಗೇನಹಳ್ಳಿ ಗ್ರಾಮದ ಸರ್ವೆ ನಂಬರ್ 234 ರಲ್ಲಿ 4 ಎಕರೆ 28 ಗುಂಟೆ ಖಾತೆ ಮಾಡುವುದರ ಬದಲಿಗೆ ಸರ್ಕಾರಿ ಗೋಮಾಳದ ಜಮೀನು ಸೇರಿ 18 ಎಕರೆ 27 ಗುಂಟೆಗೆ ಅಕ್ರಮವಾಗಿ ಖಾತೆ ಮಾಡಿರುವುದನ್ನು ವಿರೋಧಿಸಿ ಗ್ರಾಮಸ್ಥರು ಉಪವಿಭಾಗಾಧಿಕಾರಿ ಗಳಿಗೆ ಮನವಿ ಪತ್ರ ಸಲ್ಲಿಸಿದರು.

ಕೊಡಿಗೇನಹಳ್ಳಿ ಹೋಬಳಿ ಅಡವಿನಾಗೇನಹಳ್ಳಿ ಗ್ರಾಮದ ಸರ್ವೆ ನಂಬರ್ 234ರ ವಿಸ್ತೀರ್ಣ 18 ಎಕರೆ 27 ಗುಂಟೆ ಜಮೀನು ಮೂಲತಃ ಸರ್ಕಾರಿ ಗೋಮಾಳ ಜಮೀನಾಗಿದ್ದು ಇದರ ಪೈಕಿ 4 ಎಕರೆ 28 ಗುಂಟೆ ಜಮೀನನ್ನು ಸಿ ಶ್ರೀನಿವಾಸ್ ರಂಗಚಾರಿ ಎಂಬುವವರು ಇನಾಂತಿ ಜಿಲ್ಲಾಧಿಕಾರಿ, ಬೆಂಗಳೂರು ರವರಿಂದ ಮಂಜೂರಿ ಮಾಡಿಸಿಕೊಂಡಿದ್ದು ಮಂಜೂರಿಯಂತೆ ಎಂ ಆರ್ ನಂಬರ್ 15೦/1985–86 ರವರೆಗೆ ವಿಸ್ತೀರ್ಣ 18 ಎಕರೆ 27 ಗುಂಟೆ ಎಂದು ಜಂಟಿಯಾಗಿ ಮುಂದುವರೆದಿದ್ದು. ತದನಂತರ ತಿರುಚಿ ತಹಸಿಲ್ದಾರ್ ಮಧುಗಿರಿ ತಾಲೂಕ್ ರವರ ಮುಂದೆ 4 ಎಕರೆ 28 ಗುಂಟೆ ಬದಲಿಗೆ 18 ಎಕರೆ 27 ಗುಂಟೆ ಸರ್ಕಾರಿ ಗೋಮಾಳದ ಜಮೀನನ್ನು ಸೇರಿ ಪೌತಿ ಖಾತೆ ಮಾಡಿಸಿಕೊಂಡಿರುತ್ತಾರೆ.

ನಂತರ ಉಪ ವಿಭಾಗಾಧಿಕಾರಿಯವರಲ್ಲಿ ಪ್ರಕರಣ ದಾಖಲಿಸಿ ಸರ್ಕಾರಿ ಗೋಮಾಳ ಜಮೀನು ಸೇರಿ 18 ಎಕರೆ 27 ಗುಂಟೆ ಜಮೀನನ್ನು ಯಾವುದೇ ಮಂಜೂರಾತಿ ದಾಖಲೆಗಳನ್ನು ಪರಿಶೀಲಿಸದೆ ಮತ್ತು



ಮಂಜೂರಿದಾರರಿಗೆ ಸುಮಾರು 90 ರಿಂದ 100 ಎಕರೆ ಜಮೀನು ಹೊಂದಿದ್ದರೂ ಕರ್ನಾಟಕ ಭೂಮಂಜೂರಾತಿ ನಿಯಮಗಳನ್ನು ಉಲ್ಲಂಘನೆ ಮಾಡಿ ಸಿ ನರಸಿಂಹಾಚಾರ್ ಎಂಬುವವರ ಹೆಸರಿಗೆ ಖಾತೆ ಮಾಡಲು ಆದೇಶಿಸಿರುತ್ತಾರೆ.

ಮಂಜೂರಿಯಂತೆ 4 ಎಕರೆ 28ಗುಂಟೆ ಜಮೀನನ್ನು ಹೊರತುಪಡಿಸಿ ಉಳಿಕೆ ಜಮೀನನ್ನು ಸರ್ಕಾರಕ್ಕೆ ಸ್ವಾಧೀನ ಪಡಿಸಿಕೊಂಡು ಅಡವಿನಾಗೇನಹಳ್ಳಿ ಗ್ರಾಮದಲ್ಲಿ ಸುಮಾರು 200 ಮನೆಗಳು ಇದ್ದು ಎಲ್ಲಾ ಕುಟುಂಬಗಳು ವ್ಯವಸಾಯ ಮತ್ತು ಹೈನುಗಾರಿಕೆಯ ಮೇಲೆ ಅವಲಂಬಿತರಾಗಿದ್ದಾರೆ. ದನ–ಕರು, ಎಮ್ಮೆ, ಹಸು, ಕುರಿ, ಮೇಕೆ, ಜಾನುವಾರಗಳನ್ನು ಮೇಯಿಸಲು ಮತ್ತು ನಮ್ಮೂರಿನ ಸರ್ಕಾರಿ ಶಾಲೆಗೆ ಆಟದ ಮೈದಾನವೂ ಇಲ್ಲ. ಹಾಗೂ ಗ್ರಾಮದ ಸುತ್ತಮುತ್ತಲು ಎಲ್ಲಿಯೂ ಗೋಮಾಳದ ಜಮೀನು ಇರುವುದಿಲ್ಲ. ಈ ಜಮೀನನ್ನು ಜಾನುವಾರುಗಳನ್ನು ಮೇಯಿಸಲು ಉಪಯೋಗಿಸುತ್ತಿದ್ದು ಈಗ ಗಂಗಮ್ಮ ಎಂಬುವರು ಸರ್ಕಾರಿ ಜಮೀನು ಸೇರಿ ಕ್ರಯ ಪತ್ರದಂತೆ ಖಾತೆ ಮಾಡಿಸಿಕೊಂಡಿದ್ದು ಈಗ ಜಮೀನನ್ನು ಸ್ವಾಧೀನ ಪಡಿಸಿಕೊಳ್ಳಲು ಬಂದು ಗ್ರಾಮಸ್ಥರು ಸ್ವಚ್ಛಗೊಳಿಸುವಾಗ ಊರಿನ ಮುಖಂಡರು ದಾಖಲೆಗಳನ್ನು ಪರಿಶೀಲಿಸಿಕೊಂಡಾಗ ಈ ವಿಷಯ ಬೆಳಕಿಗೆ ಬಂದಿರುತ್ತದೆ.

ಈ ವಿಷಯವಾಗಿ ಮಧುಗಿರಿ ಉಪವಿಭಾಗಾಧಿಕಾರಿ ಹಾಗೂ ತಹಶೀಲ್ದಾರ್ ರವರಲ್ಲಿ ದೂರು ಕೊಟ್ಟರು ಯಾವುದೇ ಕ್ರಮ ಕೈಗೊಂಡಿರುವುದಿಲ್ಲ. ಗಂಗಮ್ಮ ರವರು ಸದರಿ ಜಮೀನನ್ನು ಮತೊಬ್ಬರಿಗೆ ಪರಭಾರೆ ಮಾಡುವುದರೊಳಗೆ ನಕಲಿ ದಾಖಲೆಗಳನ್ನು ಸೃಷ್ಟಿಸಿರುವ ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಕೈಗೊಂಡು ಜಮೀನನ್ನು ಗ್ರಾಮಸ್ಥರಿಗೆ ಉಳಿಸಿಕೊಡಬೇಕೆಂದು ಮನವಿ ಸಲ್ಲಿಸಿದ್ದಾರೆ.



ನಿವೃತ್ತ ಮುಖ್ಯೋಪಾಧ್ಯಾಯ ,ಪ್ರಗತಿಪರ ಶಿಕ್ಷಕ ಗೋವಿಂದಯ್ಯ ನಿಧನ

ಸೂರ್ಯಪ್ರಗತಿನ್ಯೂಸ್.ಕಾಂ



ತುಮಕೂರು :ಮಧುಗಿರಿ ತಾಲ್ಲೂಕಿನ ಐಡಿಹಳ್ಳಿಯ ನಿವೃತ್ತ ಮುಖ್ಯೋಪಾಧ್ಯಾಯ ಪ್ರಗತಿಪರ ಕೃಷಿಕರರಾಗಿದ್ದ ಕವಯತ್ರಿ ಹಾಗೂ ಕಲೇಸಂ ಮಾಜಿ ಅಧ್ಯಕ್ಷರಾದ ಜಿ. ಮಲ್ಲಿಕಾ ಬಸವರಾಜು ತಂದೆ ಗೋವಿಂದಯ್ಯ ಅವರು ಮೇ 19ರ ಮಂಗಳವಾರ ಮಧ್ಯಾಹ್ನ ನಿಧನರಾಗಿದ್ದಾರೆ.

ನಿವೃತ್ತ ಶಿಕ್ಷಕರಾಗಿದ್ದ ಅವರು, ಕೃಷಿ ಹಾಗೂ ವೃಕ್ಷ ಪ್ರೇಮಿ .ಬಹುತೇಕ ಹಳ್ಳಿಯಲ್ಲೇ ಬದುಕು ನಡೆಸಿದ ಅವರು, ಮಲ್ಲಿಕಾ ಬಸವರಾಜು ಸೇರಿದಂತೆ ಮೂವರು ಪುತ್ರರು, ಒಬ್ಬ ಹಾಗೂ ಮೊಮ್ಮಕ್ಕಳನು ಅಗಲಿದ್ದಾರೆ.

ತೀರಾ ಇತ್ತೀಚಿನವರೆಗೂ ಪಾದರಸದಂತೆ ಹೊಲ, ತೋಟ ಎಂದೆಲ್ಲ ಖುಷಿಯಿಂದ ಓಡಾಡುತ್ತಿದ್ದ ಗೋವಿಂದಯ್ಯ ಅವರು, ಪ್ರತಿಯೊಬ್ಬ ಮಕ್ಕಳು, ಮೊಮ್ಮಕ್ಕಳ ಹೆಸರಿನಲ್ಲಿ ಗಿಡನೆಟ್ಟಿದ್ದರು. "ಬೇಸಾಯವೇ ಬದುಕು" ಎಂಬ ಮಾತಿಗೆ ಪೂರಕವಾಗಿದ್ದ ಅವರು, ಶಿಕ್ಷಕ ವೃತ್ತಿಯಲ್ಲೂ ವಿದ್ಯಾರ್ಥಿಗಳ ಪ್ರೀತಿಗೆ ಪಾತ್ರರಾಗಿದ್ದರು.

ನೂರಕ್ಕೂ ಹೆಚ್ಚು ಕವನಗಳನ್ನು ರಚಿಸಿದ್ದಾರೆ ಮೇ 20 ರಬೆಳಿಗ್ಗೆ ಐಡಿಹಳ್ಳಿಯ ಅವರ ತೋಟದಲ್ಲಿ ಅಂತ್ಯಕ್ರಿಯೆ ನಡೆಯಯಿತು.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ
ಜಾಹೀರಾತಿಗಾಗಿ ಸಂಪರ್ಕಿಸಿ: 9901010109

"ಸಾಂಸ್ಕೃತಿಕ ಕಾರ್ಯಕ್ರಮಗಳ ಮೂಲಕ ಕ್ರಿಯಾಶೀಲತೆ ಹೆಚ್ಚಲಿ

ಸೂರ್ಯಪ್ರಗತಿನ್ಯೂಸ್.ಕಾಂ

ತಿಪಟೂರು : ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವ ಮೂಲಕ ವಿದ್ಯಾರ್ಥಿಗಳು ತಮ್ಮಲ್ಲಿನ ಪಠ್ಯೇತರ ಕೌಶಲ್ಯಗಳನ್ನು ವೃದ್ಧಿಸಿಕೊಳ್ಳಬೇಕು. ಕಾಲೇಜು ಮಟ್ಟದಿಂದಲೇ ಎಲ್ಲ ರೀತಿಯ ಸ್ಪರ್ಧೆಗಳಲ್ಲಿ ಭಾಗವಹಿಸುವ ಮೂಲಕ ಕ್ರಿಯಾಶೀಲತೆ ಮೈಗೂಡಿಸಿಕೊಳ್ಳಬೇಕು ಎಂದು ಸರ್ಕಾರಿ ಪ್ರಥಮ ದರ್ಜೆ ಕಾಲೇಜು ತಿಪಟೂರು ಪ್ರಾಂಶುಪಾಲರಾದ ಡಾ.ಶಶಿಕುಮಾರ್.ಎಚ್.ಸಿ ಅವರು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಆವರಣದ ರಂಗಮಂದಿರದಲ್ಲಿ ಮಂಗಳವಾರ ಆಯೋಜಿಸಿದ್ದ 'ಸಾಂಸ್ಕೃತಿಕ ಸಂಭ್ರಮ 2026' ಸಾಂಪ್ರದಾಯಿಕ ದಿನ ಮತ್ತು ಜಾನಪದ ಉತ್ಸವ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಕಾರ್ಯಕ್ರಮದ ಅದ್ಧೂರಿ ಆಯೋಜನೆಗೆ ಕಾರಣೀಭೂತರಾದ ಎಲ್ಲ ಪ್ರಾಧ್ಯಾಪಕ ಬಳಗಕ್ಕೆ ಮತ್ತು ಎಲ್ಲ ಸ್ಪರ್ಧೆಗಳಲ್ಲೂ ಸಕ್ರಿಯವಾಗಿ ಭಾಗವಹಿಸಿದ ವಿದ್ಯಾರ್ಥಿಗಳಿಗೂ ಕಾರ್ಯಕ್ರಮ ಯಶಸ್ವಿಗೊಳಿಸಿದ್ದಕ್ಕಾಗಿ ಧನ್ಯವಾದ ತಿಳಿಸಿದರು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಕನ್ನಡ ವಿಭಾಗದ ಮುಖ್ಯಸ್ಥರಾದ ಸ್ಮಿತಾ, ಜನಪದ ಉತ್ಸವ ಎಂಬ ಈ ಸಂಭ್ರಮದ ಕಾರ್ಯಕ್ರಮಕ್ಕೆ ತಮ್ಮನ್ನೂ ಉದ್ಘಾಟಕರಾಗಿ ಆಯ್ಕೆ ಮಾಡಿದ್ದು ಅತ್ಯಂತ ಸಂತಸ ತಂದಿದ್ದು, ಜನಪದರು ಹೆಣ್ಣನ್ನು ಅತ್ಯಂತ ಗೌರವ ಮತ್ತು ಪ್ರೀತಿಯಿಂದ ಹಾಡಿ ಹೊಗಳಿದ್ದಾರೆ. ಕಾರ್ಯಕ್ರಮ ಆಯೋಜಕರು ಕೂಡ ಒಬ್ಬ ಹೆಣ್ಣಾದ ಕಾರಣ ಅಂತಹ ಜನಪದ ಉತ್ಸವಕ್ಕೆ ಒಂದು ಹೆಣ್ಣು ಉದ್ಘಾಟಕಳಾಗೋದು ಸೂಕ್ತ ಎಂದೆನಿಸಿರಬಹುದು. ಅಷ್ಟಕ್ಕೂ ಇಂತಹ ವಿಷಯಗಳಲ್ಲಿ ಕಾಲೇಜಿನವರಿಗಿಂತ ಹೊರಗಿನವರು ಉತ್ತಮ ಎಂಬ ಮಾತೇ ಬರುವುದಿಲ್ಲ. ವಿಷಯದೆಡೆಗಿನ ಜ್ಞಾನ ಒಂದಿದರೆ ಸಾಕು ಎಂದು ಜಾನಪದ ಗೀತೆಯೊಂದನ್ನು ಹಾಡಿ ತಮ್ಮ ಉದ್ಘಾಟನಾ ಭಾಷಣ ಮುಗಿಸಿದರು.

ಕಾರ್ಯಕ್ರಮದಲ್ಲಿ ಸಾಂಸ್ಕೃತಿಕ ಕಾರ್ಯಕ್ರಮಗಳ ಸಂಯೋಜಕರಾದ ಸುಭದ್ರಮ್ಮ.ಎಮ್, ವಾಣಿಜ್ಯ ಶಾಸ್ತ್ರ ವಿಭಾಗದ ಸಹಾಯಕ ಪ್ರಾಧ್ಯಾಪಕ ಲೆಫ್ಟಿನೆಂಟ್ ಡಾ.ವಿರುಪಾಕ್ಷ.ಜೆ.ಡಿ, ಮನಃಶಾಸ್ತ್ರ ವಿಭಾಗದ ಮುಖ್ಯಸ್ಥ ಬಾಗಪ್ಪ ಛಲವಾದಿ, ಇತಿಹಾಸ ವಿಭಾಗದ ಮುಖ್ಯಸ್ಥ ಶಿವಕುಮಾರ್.ಸಿ.ಜಿ, ಸೇರಿದಂತೆ ವಿವಿಧ ವಿಭಾಗಗಳ

ಕೃಷಿಕ ರೈತರಿಗಾಗಿ ಹೊಸ ಸಂಶೋಧನೆ; 80 ಕಿ.ಮೀ. ವೇಗದಲ್ಲಿ ಚಲಿಸುವ ಟ್ರ್ಯಾಕ್ಟರ್ ಆವಿಷ್ಕಾರ

10ನೇ ತರಗತಿಯ 16 ವರ್ಷದ ಬಾಲಕ ಪ್ರತೀಕ್ ಎಚ್.ಎ. ಇವರಿಂದ ವಿದ್ಯುತ್ ಚಾಲಿತ ಟ್ರ್ಯಾಕ್ಟರ್ ನಿರ್ಮಾಣ


ಸೂರ್ಯಪ್ರಗತಿನ್ಯೂಸ್.ಕಾಂ


ತುಮಕೂರು: ಕೃಷಿ ಕೆಲಸಕ್ಕೆ ಬಳಸುವ ಟ್ರ್ಯಾಕ್ಟರ್ 80 ಕಿ.ಮೀ. ವೇಗದಲ್ಲಿ ಚಲಿಸುವಂತೆ 10ನೇ ತರಗತಿಯ ವಿದ್ಯಾರ್ಥಿಯೋರ್ವ ಸಂಶೋಧನೆ ನಡೆಸಿ ಆವಿಷ್ಕಾರ ಮಾಡುವ ಮೂಲಕ ಎಲ್ಲರ ಗಮನ ಸೆಳೆದಿದ್ದಾರೆ.

ಚಿಕ್ಕನಾಯಕನಹಳ್ಳಿ ತಾಲ್ಲೂಕು ಹಂದನಕೆರೆ ಗ್ರಾಮದ 16 ವರ್ಷದ ಬಾಲಕ ಪ್ರತೀಕ್ ಎಚ್.ಎ., 10ನೇ ತರಗತಿಯ ವಿದ್ಯಾರ್ಥಿಯಾಗಿದ್ದು, ವಿದ್ಯಾವಾರಿಧಿ ಅಂತಾರಾಷ್ಟ್ರೀಯ ಶಾಲೆ, ದುಗುಡಿಹಳ್ಳಿ ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ವ್ಯಾಸಂಗ ಮಾಡುತ್ತಿದ್ದಾರೆ. ಇವರ ತಂದೆ ಆನಂದ ಬಿ, ಅಂಬೇಡ್ಕರ್ ವಸತಿ ಶಾಲೆಯಲ್ಲಿ ಶಿಕ್ಷಕರು ಮತ್ತು ತಾಯಿ ಮರುಳಸಿದ್ದಮ್ಮ ಗೃಹಿಣಿಯಾಗಿದ್ದಾರೆ.

ಪ್ರತೀಕ್ ಎಚ್ ಎ, ರೈತರ ಕಷ್ಟಗಳನ್ನು ನೋಡುತ್ತಿದ್ದ ಬಾಲಕನಾಗಿದ್ದು, ಇದಕ್ಕೆಲ್ಲ ಪರಿಹಾರ ನೀಡಬೇಕೆಂದು ನಿರ್ಧರಿಸಿ ತನ್ನ ಸಂಶೋಧನಾ ಪಯಣವನ್ನು 2025ರ ವಿಶ್ವ ಪರಿಸರ ದಿನದಂದು ತನ್ನ ಶಿಕ್ಷಕರು ಹೇಳಿದ ಮಾತಿಗೆ ಬೆಲೆ ಕೊಡಬೇಕೆಂದು ಆತ ಈ ಆವಿಷ್ಕಾರವನ್ನು ಪ್ರಾರಂಭಿಸುತ್ತಾನೆ. ಅಂದು ಶುರುವಾದ ಪಯಣ ಇಂದು ಪೇಟೆಂಟ್ ಪಡೆಯುವಲ್ಲಿ ಕೊನೆಯ ಹಂತಕ್ಕೆ ತಲುಪಿದೆ.

ವ್ಯವಸಾಯದಲ್ಲಿ ದಿನನಿತ್ಯ ಬಳಸುವ ವಸ್ತುಗಳಲ್ಲಿ ಟ್ರ್ಯಾಕ್ಟರ್ ಕೂಡ ಒಂದು. ಪ್ರಸ್ತುತ ಲಭ್ಯವಿರುವ ಟ್ರ್ಯಾಕ್ಟರ್‌ಗಳು ಡೀಸೆಲ್‌ನಿಂದ ಚಾಲ್ತಿಯಾಗಲ್ಪಡುತ್ತಿವೆ. ಈ ಟ್ರಾಕ್ಟರ್‌ಗಳನ್ನು 1000 ಗಂಟೆ ಚಾಲ್ತಿಯಲ್ಲಿ ಇಡಬೇಕಾದರೆ 4000–4,500 ಲೀಟರ್ ನಷ್ಟು ಡೀಸೆಲ್ ಬೇಕಾಗುತ್ತದೆ ಮತ್ತು ಈ ಬಳಕೆಯಾದ ಡೀಸೆಲ್‌ನಿಂದ ಸುಮಾರು 98,100 ಕೆ.ಜಿ. ಯಷ್ಟು ಇಂಗಾಲದ ಡೈ ಆಕ್ಸೈಡ್ ಹೊರ ಬರುತ್ತದೆ. ಇದರಿಂದ ನಮ್ಮ ಪರಿಸರ ದಿನದಿಂದ ದಿನಕ್ಕೆ ಹದಗೆಟ್ಟು ಹಾಳಾಗುತ್ತದೆ. ಇವುಗಳನ್ನು ಬಳಸುವ ರೈತರಲ್ಲಿ ಶೇ. 50 ರಷ್ಟು ರೈತರು ಕಿವುಡತನದಿಂದ ಬಳಲುತ್ತಿದ್ದಾರೆ. ಇದಲ್ಲದೆ ಈ ಟ್ರಾಕ್ಟರ್‌ಗಳು ರಸ್ತೆಯಲ್ಲಿ ಚಲಿಸುವಾಗ ಕೇವಲ 30–35 ಕಿ.ಮೀ. ವೇಗದಲ್ಲಿ ಮಾತ್ರ ಚಲಿಸಲು ಸಾಧ್ಯವಾಗುತ್ತಿದೆ. ಇದರಿಂದಾಗಿ ರೈತರಿಗೆ ಬಹಳ ಸಮಯ ವ್ಯರ್ಥವಾಗುತ್ತಿದೆ ಮತ್ತು ಸೊಂಟ, ಮಂಡಿ, ಕೈ ನೋವುಗಳು ಉಂಟಾಗುತ್ತಿವೆ. ಇವನ್ನೆಲ್ಲ ನೋಡಿದ ಪ್ರತೀಕ್ ಇದಕ್ಕೆಲ್ಲ ಪರಿಹಾರ ನೀಡಬೇಕು ಎಂದು ನಿರ್ಧರಿಸಿ ಈ ಆವಿಷ್ಕಾರ ತಂದಿದ್ದಾರೆ.





ಈ ಆವಿಷ್ಕಾರದ ಟೈಟಲ್ ಪ್ರೊಪಲ್ಷನ್ ಮತ್ತು ಪವರ್ ಟೇಕ್–ಆಫ್ ಕಾರ್ಯಾಚರಣೆ ಮತ್ತು ಅದರ ವಿಧಾನವನ್ನು ಒದಗಿಸಲು ಡ್ರೈವ್ ಅಸೆಂಬ್ಲಿ ಎಂದು ಇಡಲಾಗಿದೆ.

ಟ್ರ್ಯಾಕ್ಟರ್ ಗಳನ್ನು ಗರಿಷ್ಠ 80 ಕಿ.ಮೀ. ವೇಗದಲ್ಲಿ ರಸ್ತೆಯ ಮೇಲೆ ಚಲಿಸಲು ಮುಖ್ಯ ಕಾರಣವೆಂದರೆ ಅದರ ಡ್ಯೂಯಲ್ ಮೋಡ ಗೇರ್ ಬಾಕ್ಸ್. ಟ್ರ್ಯಾಕ್ಟರ್‌ನಲ್ಲಿ 6– ಪಿಟಿಓ ಗೇರ್‌ಗಳು (3 forward+ 3 reverse) ಲಭ್ಯವಿದ್ದು, ಹಲವು ತರಹದ ವ್ಯವಸಾಯಕ್ಕೆ ಉಪಯೋಗವಾಗುತ್ತದೆ.



ಟ್ರ್ಯಾಕ್ಟರ್‌ನಲ್ಲಿ ಚಾಸಿಸ್ ಮತ್ತು ಸಸ್ಪೆನ್ಷನ್ ಅಳವಡಿಸುವ ಮೂಲಕ ರೈತರ ಕಂಫರ್ಟ್ ಹೆಚ್ಚಿಸಬಹುದು.

ಈ ಟ್ರಾಕ್ಟರ್ ಕೇವಲ ವಿದ್ಯುತ್‌ನಿಂದ ಚಾಲಿತವಾಗಿರುವಂತದ್ದು. ಇದರಲ್ಲಿ ಎಸಿ ಕ್ಯಾಬಿನ್, ಏರೋ ಡೈನಮಿಕ್ ಡಿಸೈನ್, 540– ಡಿಗ್ರಿ ಕ್ಯಾಮೆರಾ ಮತ್ತು 2026ಕ್ಕೆ ಬೇಕಾಗಿರುವ ಇನ್ನೂ ಹಲವಾರು ಫೀಚರ್ಸ್‌ಗಳು ಲಭ್ಯವಿರುವಂತೆ ಈ ವಿದ್ಯಾರ್ಥಿ ಆವಿಷ್ಕಾರ ಮಾಡಿದ್ದಾರೆ.

ವಿದ್ಯುತ್‌ನಿಂದ ಚಾಲಿತವಾಗುವುದರಿಂದ ನಮ್ಮ ಪರಿಸರಕ್ಕೆ ಹಾನಿಯಾಗದಂತೆ ಮತ್ತು ರೈತರ ನೋವುಗಳನ್ನು ಹೋಗಲಾಡಿಸಿ ಅವರಿಗೆ ಮೂರು ಪಟ್ಟು ಹೆಚ್ಚು ಲಾಭವನ್ನು ಪಡೆಯುವಂತೆ ಮಾಡುತ್ತದೆ. ಈ ಆವಿಷ್ಕಾರವನ್ನು ಪೇಟೆಂಟ್ ಪಡೆಯಲು ಇಂಡಿಯನ್ ಪೇಟೆಂಟ್ ಆಫೀಸ್‌ಗೆ ನೀಡಿ ಪೇಟೆಂಟ್ ಗ್ರಾಂಟ್ ಆಗುವಲ್ಲಿ ಕೊನೆ ಹಂತದ ಪರಿಶೀಲನೆಗೆ ಒಳಪಟ್ಟಿದೆ. ಸದ್ಯದಲ್ಲೇ ಈ ಆವಿಷ್ಕಾರವು ಪೇಟೆಂಟ್ ಗ್ರಾಂಟ್ ಪಡೆಯುವಲ್ಲಿ ಯಶಸ್ವಿಯಾಗುತ್ತದೆ ಎಂದು ಪ್ರತೀಕ್ ತಿಳಿಸಿದ್ದಾರೆ.

ಈ ಸಂಬಂಧ ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ನಂಬರ್: 9483438495, 9964619756 ಹಾಗೂ ಇ–ಮೇಲ್ ಐಡಿ; pratheekha0109@gmail.com ಅನ್ನು ಸಂಪರ್ಕಿಸಬಹುದಾಗಿದೆ.

ಮಕ್ಕಳ ಸಾಹಿತಿ ದಿ|| ಕೆ. ಭೈರಪ್ಪನವರ ನಿಧನ ತುಂಬಲಾರದ ನಷ್ಟ

ಸೂರ್ಯಪ್ರಗತಿನ್ಯೂಸ್.ಕಾಂ



ತುರುವೇಕೆರೆಯ ಮಾಯಸಂದ್ರದಲ್ಲಿ ಪ್ರಾಚಾರ್ಯರಾಗಿ ಸೇವೆ ಸಲ್ಲಿಸಿದ ಕೆ. ಭೈರಪ್ಪನವರು ಸಮಾಜಶಾಸ್ತ್ರದ ಅಧ್ಯಾಪಕರಾಗಿ ಶಿಕ್ಷಣ ಇಲಾಖೆಗೆ ಸಮಾಜಶಾಸ್ತ್ರಕ್ಕೆ ಸಂಬಂಧಪಟ್ಟ ಪಠ್ಯಪುಸ್ತಕಗಳನ್ನು ಬರೆದುಕೊಟ್ಟಿದ್ದಾರೆ. ಕೆ. ಭೈರಪ್ಪನವರು ಮಕ್ಕಳ ಸಾಹಿತ್ಯಕ್ಕೆ ಹೆಚ್ಚು ಒತ್ತನ್ನು ಕೊಟ್ಟಿದ್ದಾರೆ. ಇವರು ಸದಾ ಶ್ವೇತವಸ್ತ್ರಧಾರಿ ಹಾಗೂ ಕಪ್ಪು ಕನ್ನಡಕ ಧರಿಸುತ್ತಿದ್ದರು. ಅವರು ಎತ್ತರದ ಅಜಾನುಬಾಹುವಾಗಿದ್ದರೂ ಮೆಲುವಾದ ಧ್ವನಿಯಿಂದ ಮಾತನಾಡಿಸುತ್ತಿದ್ದರು. ಎಲ್ಲರನ್ನೂ ಗೌರವದಿಂದ ಕಾಣುವ ವ್ಯಕ್ತಿತ್ವ ಅವರದಾಗಿತ್ತು. ಇವರು ಕನ್ನಡ ಸಾಹಿತ್ಯ ಪರಿಷತ್ತಿನಲ್ಲಿದ್ದಾಗ ಕಿರಿಯರಲ್ಲಿನ ವಿದ್ವತ್ತನ್ನು ಗುರ್ತಿಸುತ್ತಿದ್ದರು. ಅನೇಕ ಉದಯೋನ್ಮುಖ ಕವಿ, ಸಾಹಿತಿಗಳಿಗೆ ಕಾರ್ಯಕ್ರಮಗಳಲ್ಲಿ ಅವಕಾಶ ನೀಡಿ ಪ್ರೋತ್ಸಾಹ ನೀಡುತ್ತಿದ್ದರು ಕೆ. ಭೈರಪ್ಪನವರಿಗೂ ಹಾಗೂ ವಿದ್ಯಾವಾಚಸ್ಪತಿ ಕವಿತಾಕೃಷ್ಣರವರಿಗೂ ಬಹಳ ಅವಿನಾಭಾವ ಸಂಬಂಧವಿತ್ತು. ಕೆ. ಭೈರಪ್ಪನವರ ನಿಧನದಿಂದ ಕನ್ನಡ ಸಾಹಿತ್ಯ ಪರಿಷತ್ತಿಗೆ ಹಾಗೂ ಕನ್ನಡ ಸಾರಸ್ವತಲೋಕಕ್ಕೆ ತುಂಬಲಾರದ ನಷ್ಟವಾಗಿದೆ. ಅವರ ಅಗಲಿಕೆಯ ನೋವನ್ನು ಅವರ ಕುಟುಂಬ ವರ್ಗಕ್ಕೆ ಸಹಿಸುವ ಶಕ್ತಿಯನ್ನು ಭಗವಂತ ನೀಡಲಿ ಅವರ ದಿವ್ಯಾತ್ಮಕ್ಕೆ ಶಾಂತಿಯನ್ನು ಕೋರುವೆ" ಎಂದು ನುಡಿದರು. ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಕೆ.ಎಸ್. ಸಿದ್ಧಲಿಂಗಪ್ಪನವರು ಕೆ. ಭೈರಪ್ಪನವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾ ಸಂಚಾಲಕರಾದ ಸಿ.ಎಸ್. ಯೋಗಾನಂದ್‌ರವರು ಮಾತನಾಡುತ್ತಾ ದಿವಂಗತರಾದ ಶ್ರೀಯುತ ಕೆ. ಭೈರಪ್ಪನವರು ಕನ್ನಡ ಸಾಹಿತ್ಯ ಪರಿಷತ್ತಿನೊಂದಿಗೆ ಬಹಳ ಅವಿನಾಭಾವ ಸಂಬಂಧ ಹೊಂದಿದ್ದರು. ತುರುವೇಕೆರೆಯಲ್ಲಿ ಪ್ರಥಮ ತಾಲ್ಲೂಕು ಕನ್ನಡ ಸಾಹಿತ್ಯ ಸಮ್ಮೇಳನ ನಡೆಯಲು ಕಾರಣಕರ್ತರಾಗಿದ್ದರು. ಇವರ ಅಧ್ಯಕ್ಷತೆಯಲ್ಲಿ ಈ ಸಾಹಿತ್ಯ ಸಮ್ಮೇಳನ ಯಶಸ್ವಿಯಾಗಿ ನಡೆಯಿತು. "ಕೆ. ಭೈರಪ್ಪನವರು ಮಕ್ಕಳ ಸಾಹಿತ್ಯದಲ್ಲಿ ಹೆಚ್ಚು ಕೃಷಿ ಮಾಡಿದ್ದಾರೆ. ಇವರು ಸುಮಾರು 120 ಕ್ಕೂ ಹೆಚ್ಚು ಮಕ್ಕಳ ಕೃತಿಗಳನ್ನು ರಚಿಸಿದ್ದಾರೆ. ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಪುಸ್ತಕಗಳನ್ನು ರಚಿಸಿದ್ದಾರೆ. ಕೆ. ಭೈರಪ್ಪನವರ ಸಾಹಿತ್ಯದ ಸಾಧನೆಗಾಗಿ ಹಲವಾರು ಪ್ರಶಸ್ತಿಗಳೂ ಬಂದಿದ್ದು ಅವುಗಳ ಜೊತೆಗೆ ಎಕ್ಸ್‌ಲೆನ್ಸಿ ಅವಾರ್ಡ್ ಬಂದಿತ್ತು. ನಮ್ಮ ನಾಡಿನ ಪ್ರತಿಷ್ಠಿತ ಪುಸ್ತಕ ಪ್ರಕಾಶನ ಸಂಸ್ಥೆಯಾದ ಸ್ವಪ್ನ ಬುಕ್ ಸ್ಟಾಲ್‌ರವರು ಕೆ. ಭೈರಪ್ಪನವರ ಸಾಕಷ್ಟು ಕೃತಿಗಳನ್ನು ತಮ್ಮ ಪ್ರಕಾಶನದ ಮೂಲಕ ಹೊರತಂದಿರುವುದು ಹೆಗ್ಗಳಿಕೆಯ ವಿಚಾರವಾಗಿದೆ. ತುರುವೇಕರೆ ತಾಲ್ಲೂಕಿನಲ್ಲಿ ಕನ್ನಡ ಸಾಹಿತ್ಯದ ಚಟುವಟಿಕೆಗಳಿಗೆ ಸಾಕಷ್ಟು ಪ್ರೋತ್ಸಾಹ ನೀಡಿದ್ದಾರೆ. ಮಾಯಸಂದ್ರದಲ್ಲಿ ಹೋಬಳಿ ಮಟ್ಟದ ಕನ್ನಡ ಭವನ ನಿರ್ಮಾಣವಾಗಲು ಸಾಕಷ್ಟು ಪ್ರೋತ್ಸಾಹ ಹಾಗೂ ಮಾರ್ಗದರ್ಶನ ನೀಡಿದ ಮಹನೀಯರಾಗಿದ್ದಾರೆ" ಎಂದು ಹೇಳಿ ಶ್ರದ್ಧಾಂಜಲಿ ಅರ್ಪಿಸಿ ಕೆ. ಭೈರಪ್ಪನವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿದರು.

ಸಣ್ ಸುದ್ದಿ

ಡಾ: ಬಿ.ಆರ್. ಅಂಬೇಡ್ಕರ್ ವಸತಿ ಶಾಲೆ ಪ್ರವೇಶಾತಿಗೆ ಅರ್ಜಿ ಆಹ್ವಾನ

ಡಾ: ಬಿ.ಆರ್. ಅಂಬೇಡ್ಕರ್ ವಸತಿ ಶಾಲೆ ಪ್ರವೇಶಾತಿಗೆ ಅರ್ಜಿ ಆಹ್ವಾನ
ತುಮಕೂರು: ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ತುಮಕೂರು ನಗರದ ವೀರಸಾಗರ ಬಡಾವಣೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಭಾರತ ರತ್ನ ಡಾ. ಬಿ.ಆರ್. ಅಂಬೇಡ್ಕರ್ ವಸತಿ ಶಾಲೆಯಲ್ಲಿ 2026–27ನೇ ಸಾಲಿಗೆ 1 ರಿಂದ 5ನೇ ತರಗತಿವರೆಗೆ ಖಾಲಿ ಇರುವ ಸ್ಥಾನಗಳ ಪ್ರವೇಶಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ.

ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ ಹಾಗೂ ಇತರೆ ಹಿಂದುಳಿದ ವರ್ಗಗಳ ವಿದ್ಯಾರ್ಥಿ ಹಾಗೂ ವಿದ್ಯಾರ್ಥಿನಿಯರು ಪ್ರವೇಶಾತಿಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಆಸಕ್ತರು ವಸತಿ ಶಾಲೆಯ ಮುಖ್ಯ ಶಿಕ್ಷಕರನ್ನು ಸಂಪರ್ಕಿಸಿ ಅರ್ಜಿ ಪಡೆದು, ಅಗತ್ಯ ದಾಖಲೆಗಳೊಂದಿಗೆ ಭರ್ತಿ ಮಾಡಿದ ಅರ್ಜಿಯನ್ನು ಮೇ 31ರೊಳಗಾಗಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ತುಮಕೂರು ತಾಲ್ಲೂಕು ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು(ಮೊ.ಸಂ. 9480843205) ಅಥವಾ ಮುಖ್ಯ ಶಿಕ್ಷಕ ತಿಮ್ಮರಾಜು ವೈ.ಟಿ.(ಮೊ.ಸಂ.8050029863) ಅವರನ್ನು ಸಂಪರ್ಕಿಸಬೇಕೆಂದು ಪ್ರಕಟಣೆ ಎಂದು ತಿಳಿಸಿದೆ.

ಹೈನುಗಾರಿಕೆ ತರಬೇತಿಗೆ ಅರ್ಜಿ ಆಹ್ವಾನ

ತುಮಕೂರು: ಹಳಿಯಾಳದ ಕೆನರಾ ಬ್ಯಾಂಕ್ ದೇಶಪಾಂಡೆ ಆರ್‌ಸೆಟಿ ವತಿಯಿಂದ ಗ್ರಾಮೀಣ ಭಾಗದ ಆಸಕ್ತ ಅಭ್ಯರ್ಥಿಗಳಿಗಾಗಿ ಹೈನುಗಾರಿಕೆ ಮತ್ತು ಎರೆಹುಳ ಗೊಬ್ಬರ ತಯಾರಿಕೆ ಕುರಿತು 12 ದಿನಗಳ ಉಚಿತ ತರಬೇತಿ ನೀಡಲು ಆಸಕ್ತರಿಂದ ಅರ್ಜಿ ಆಹ್ವಾನಿಸಲಾಗಿದೆ.

ತರಬೇತಿಯು ಜೂನ್ 12 ರಿಂದ ಆರಂಭವಾಗಲಿದೆ. 18 ರಿಂದ 45 ವರ್ಷ ವಯೋಮಿತಿಯ ಕರ್ನಾಟಕದ ಯಾವುದೇ ಜಿಲ್ಲೆಯ ಆಸಕ್ತರು ಅರ್ಜಿ ಸಲ್ಲಿಸಬಹುದು. ತರಬೇತಿಯಲ್ಲಿ ಹೈನುಗಾರಿಕೆಯ ಮೂಲಭೂತ ಜ್ಞಾನ, ಹಸುಗಳ ಆರೈಕೆ, ಆಹಾರ ನಿರ್ವಹಣೆ, ಹಾಲು ಉತ್ಪಾದನೆ, ಪಶು ಆರೋಗ್ಯ ಸಂರಕ್ಷಣೆ, ಗೋಶಾಲೆ ನಿರ್ವಹಣೆ, ಎರೆಹುಳ ಗೊಬ್ಬರ ತಯಾರಿಕೆ ವಿಧಾನ, ಸಾವಯವ ಕೃಷಿಯ ಮಹತ್ವ ಹಾಗೂ ಸ್ವಯಂ ಉದ್ಯೋಗ ಆರಂಭಿಸುವ ಕುರಿತು ಪ್ರಾಯೋಗಿಕ ತರಬೇತಿ ನೀಡಲಾಗುತ್ತದೆ.

ಆಯ್ಕೆಯಾದವರಿಗೆ ಊಟ ಮತ್ತು ವಸತಿ ಸೌಲಭ್ಯ ಒದಗಿಸಲಾಗುತ್ತದೆ. ತರಬೇತಿ ನಂತರ ಬ್ಯಾಂಕ್ ಸಾಲ ಹಾಗೂ ಸ್ವಯಂ ಉದ್ಯೋಗಕ್ಕೆ ಮಾರ್ಗದರ್ಶನ ನೀಡಲಾಗುವುದು.

ಆಸಕ್ತರು ಬಿಳಿ ಹಾಳೆಯ ಮೇಲೆ ತಮ್ಮ ಹೆಸರು, ವಿಳಾಸ, ಜನ್ಮ ದಿನಾಂಕ ಮತ್ತು ಮೊಬೈಲ್ ಸಂಖ್ಯೆಯನ್ನು ಬರೆದು, ಅದರ ಫೋಟೋವನ್ನು ಮೊ.ಸಂ. 9483485489/ 8970145354/ 9686757112ಕ್ಕೆ ವಾಟ್ಸಾಪ್ ಮೂಲಕ ಕಳುಹಿಸಬಹುದು ಅಥವಾ ಕರೆ ಮಾಡಿ ತಮ್ಮ ಹೆಸರನ್ನು ನೋಂದಣಿ ಮಾಡಿಸಬಹುದಾಗಿದೆ ಎಂದು ಸಂಸ್ಥೆಯ ನಿರ್ದೇಶಕ ಪ್ರಶಾಂತ ಬಡ್ಡಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪ್ರೋತ್ಸಾಹಧನಕ್ಕಾಗಿ ಆನ್‌ಲೈನ್ ಅರ್ಜಿ ಆಹ್ವಾನ

ತುಮಕೂರು: ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ 2026–27ನೇ ಸಾಲಿನಲ್ಲಿ ಪರಿಶಿಷ್ಟ ಜಾತಿಯ ಎಸ್.ಎಸ್.ಎಲ್.ಸಿ. ಹಾಗೂ ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ಪ್ರಥಮ ಪ್ರಯತ್ನದಲ್ಲಿ ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ನೀಡಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಸಮಾಜ ಕಲ್ಯಾಣ ಇಲಾಖೆಯ ಜಾಲತಾಣ ತಿತಿಷಿ.ತಿ.ಇಚಿಡಿ.ಟುಭಿ.ಟ ನಲ್ಲಿ ಪ್ರೋತ್ಸಾಹ ಧನ ಎಂಬ ಲಾಗಿನ್‌ನಲ್ಲಿ ರಿಜಿಸ್ಟರ್ ಆಗಿ ತಮ್ಮ ಆಧಾರ್ ನಂಬರ್ ನಮೂದಿಸಿ ಅರ್ಜಿ ಸಲ್ಲಿಸಬಹುದಾಗಿದೆ. ಸದರಿ ವಿದ್ಯಾರ್ಥಿಯ ಬ್ಯಾಂಕ್ ಖಾತೆಗೆ ಆಧಾರ್ ಲಿಂಕ್ ಆಗಿದ್ದಲ್ಲಿ ನೇರವಾಗಿ ಅರ್ಜಿ ಸಲ್ಲಿಸಬಹುದು. ಇಲ್ಲವಾದಲ್ಲಿ ಬ್ಯಾಂಕ್‌ನಲ್ಲಿ ಆಧಾರ್ ಲಿಂಕ್ ಹಾಗೂ ಎನ್‌ಪಿಸಿಐ ಲಿಂಕ್ ಮಾಡಿಸಿ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬೇಕು. ಸಲ್ಲಿಸಿದ ಅರ್ಜಿಯ ಪ್ರತಿ ಹಾಗೂ ದಾಖಲಾತಿಗಳನ್ನು ಸಂಬಂಧಿಸಿದ ತಾಲ್ಲೂಕಿನ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಗೆ ಅಥವಾ ಜಂಟಿ ನಿರ್ದೇಶಕರ ಕಚೇರಿಗೆ ಅರ್ಜಿ ಹಾಕಿದ 15 ದಿನಗೊಳಗೆ ಸಲ್ಲಿಸಬೇಕು. ಅರ್ಜಿಯ ಹಾರ್ಡ್ ಪ್ರತಿಯನ್ನು ಸಲ್ಲಿಸದೇ ಇದ್ದಲ್ಲಿ ಅಂತಹ ಅರ್ಜಿಗಳನ್ನು ಲಾಗಿನ್‌ನಿಂದ ತಿರಸ್ಕೃತವಾಗುತ್ತದೆ ಎಂದು ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ
ಜಾಹೀರಾತಿಗಾಗಿ ಸಂಪರ್ಕಿಸಿ: 9901010109

ಮೆ.ಪೂರ್ವ/ನಂತರದ ವಿದ್ಯಾರ್ಥಿನಿಲಯ ಪ್ರವೇಶಕ್ಕಾಗಿ ಆನ್‌ಲೈನ್ ಅರ್ಜಿ ಆಹ್ವಾನ

ತುಮಕೂರು: ಸಮಾಜ ಕಲ್ಯಾಣ ಇಲಾಖೆಯಡಿ 2026–27ನೇ ಸಾಲಿಗೆ ತುಮಕೂರು ಜಿಲ್ಲೆಯಲ್ಲಿ ನಡೆಯುತ್ತಿರುವ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ಬಾಲಕ/ಬಾಲಕಿಯರ ವಿದ್ಯಾರ್ಥಿನಿಲಯಗಳ ಪ್ರವೇಶಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ವಿದ್ಯಾರ್ಥಿಗಳು ವೆಬ್‌ಸೈಟ್ ತಿತಿಷಿ.ತಿ.ಇಚಿಡಿ.ಟುಭಿ.ಟ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಕ್ಕೆ ಅರ್ಜಿ ಸಲ್ಲಿಸಲು ಜೂನ್ 30 ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಕ್ಕೆ ಅರ್ಜಿ ಸಲ್ಲಿಸಲು ಜುಲೈ 30 ಕೊನೆಯ ದಿನವಾಗಿದೆ. ಹೆಚ್ಚಿನ ಮಾಹಿತಿಗಾಗಿ ಆಯಾ ತಾಲ್ಲೂಕಿನ ಸಮಾಜ ಕಲ್ಯಾಣ ಇಲಾಖೆಯನ್ನು ಸಂಪರ್ಕಿಸಬೇಕೆಂದು ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕೆರೆಯಲ್ಲಿ ಅಪರಿಚಿತ ಶವ ಪತ್ತೆ

ತುಮಕೂರು: ಬೆಳ್ಳಾವಿ ಪೊಲೀಸ್ ಠಾಣೆ ವ್ಯಾಪ್ತಿ ತುಮಕೂರು ತಾಲ್ಲೂಕಿನ ಬುಗುಡನಹಳ್ಳಿ ಕೆರೆಯಲ್ಲಿ ಮೇ 19ರಂದು ಸುಮಾರು 50 ವರ್ಷದ ಅಪರಿಚಿತ ಮಹಿಳೆಯ ಶವ ಪತ್ತೆಯಾಗಿದ್ದು, ವಾರಸುದಾರರು ಯಾರೆಂದು ತಿಳಿದು ಬಂದಿರುವುದಿಲ್ಲ.

ಮೃತಳು 5 ಅಡಿ ಎತ್ತರ, ದೃಢಕಾಯ ಶರೀರ ಹೊಂದಿದ್ದು, ಎರಡೂ ಕೈಗಳಲ್ಲಿ ಹೂವಿನ ತರಹದ ಅಚ್ಚೆ ಇರುತ್ತದೆ. ಮೃತ ದೇಹವು ಕೊಳೆತ ಸ್ಥಿತಿಯಲ್ಲಿರುತ್ತದೆ. ಮೃತಳ ವಾರಸುದಾರರು ಯಾರಾದರೂ ಇದ್ದಲ್ಲಿ ಮೊ.ಸಂ. 9480802950–31–20–00 ಅಥವಾ ದೂ.ವಾ. 0816–2278000ಯನ್ನು ಸಂಪರ್ಕಿಸಬೇಕೆಂದು ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಮನವಿ ಮಾಡಿದ್ದಾರೆ.

ಪ್ರೀತಿಯ ನೆಚ್ಚಿನ ಓದುಗ ಮಿತ್ರರೇ ಸೂರ್ಯಪ್ರಗತಿ ಕನ್ನಡ ದಿನಪತ್ರಿಕೆಯ ಸುದ್ದಿಗಳನ್ನ ಅಂತರ್ಜಾಲ ತಾಣ ವೆಬ್ ಆವೃತ್ತಿ https://suryapragathi.com ನಲ್ಲಿ ಹಾಗೂ https://epaper.suryapragathi.com ನಲ್ಲಿ ಓದಬಹುದು – ನೋಡಬಹುದು ಹೆಚ್ಚಿನ ಮಾಹಿತಿಗಾಗಿ 9901010109

ಬೆಂಗಳೂರು ಪೊಲೀಸರ ಭರ್ಜರಿ ಬೇಟೆ: 34 ಕೋಟಿ ಮೌಲ್ಯದ ಡ್ರಗ್ಸ್ ವಶಕ್ಕೆ; 8 ಮಂದಿ ಬಂಧನ

ಸೂರ್ಯಪ್ರಗತಿನ್ಯೂಸ್.ಕಾಂ

ಬೆಂಗಳೂರಿನ ಹೆಬ್ಬಾಳ ಪೊಲೀಸರು ದೆಹಲಿ ಮೂಲದ ಬೃಹತ್ ಡ್ರಗ್ ಜಾಲ ಭೇದಿಸಿದ್ದು ಬರೋಬ್ಬರಿ 34 ಕೋಟಿ ರೂಪಾಯಿ ಮೌಲ್ಯದ ಮಾದಕ ವಸ್ತುಗಳನ್ನು ಜಪ್ತಿ ಮಾಡಿದ್ದಾರೆ. ಪ್ರಕರಣ ಸಂಬಂಧ 8 ಮಂದಿ ಆರೋಪಿಗಳನ್ನು ಬಂಧಿಸಿದ್ದು ಕೇಸ್ ಕುರಿತು ಸುಮಾರು 40 ಮಂದಿಯನ್ನು ಒಳಗೊಂಡ ತಂಡ ದೆಹಲಿ ಮತ್ತು ದೆಹಲಿ ಎನ್‌ಸಿಆರ್‌ನಲ್ಲಿ ಕಾರ್ಯಾಚರಣೆ ನಡೆಸಿತ್ತು ಯಶವಂತಪುರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ದಾಖಲಾದ ಪ್ರಕರಣಗಳ ಬೆನ್ನುಬಿದ್ದ ವೇಳೆ ದೆಹಲಿಯಿಂದ ಡ್ರಗ್ಸ್ ಬರುತ್ತಿರುವ ಬಗ್ಗೆ ಖಚಿತ ಮಾಹಿತಿ ಸಿಕ್ಕಿತ್ತು ಎನ್ನಲಾಗಿದೆ.

ಹೆಬ್ಬಾಳ ಪೊಲೀಸರು ಬೃಹತ್ ಡ್ರಗ್ ಜಾಲವೊಂದನ್ನು ಭೇದಿಸಿದ್ದು ದೆಹಲಿಯಿಂದ ಬೆಂಗಳೂರಿಗೆ (ಚಟ್ಟಿರಂಚಟ್ಟಿಕಾಡಿಡಿ) ಮಾದಕ ವಸ್ತುಗಳನ್ನು ತಂದು ಮಾರಾಟ ಮಾಡ್ತಿದ್ದ ಗ್ಯಾಂಗ್ ನ ಹೆಡೆಮುರಿ ಕಟ್ಟಿದ್ದಾರೆ. ಎಂಟು ಜನ ಆರೋಪಿಗಳನ್ನು ಅರೆಸ್ಟ್ ಮಾಡಿರುವ ಪೊಲೀಸರು, ಈ ಒಂದೇ ತಂಡದಿಂದ ಸುಮಾರು 34 ಕೋಟಿ ರೂಪಾಯಿ ಮೌಲ್ಯದ ಡ್ರಗ್ಸ್ ವಶಕ್ಕೆ ಪಡೆದಿದ್ದಾರೆ. ಆರೋಪಿಗಳ ಈ ಜಾಲ ಮೂರು ಲೇಯರ್‌ಗಳಲ್ಲಿ ಕೆಲಸ ಮಾಡುತ್ತಿತ್ತು. ಮಾದಕ ವಸ್ತುಗಳ ಸಾಗಾಟಕ್ಕೆ ಆರೋಪಿಗಳು ನಾನಾ ದಾರಿಗಳನ್ನು ಕಂಡುಕೊಂಡಿದ್ದರು ಎಂಬುದು ಕೂಡ ತನಿಖೆ ವೇಳೆ ಗೊತ್ತಾಗಿದೆ.


ದೆಹಲಿಯಿಂದ ರೈಲಿನಲ್ಲಿ ಡ್ರಗ್ಸ್ ಸಾಗಿಸಿದ್ದ ಆರೋಪಿಗಳು ಅವನ್ನು ಸೀರೆ , ಐರನ್ ಮಾಡಲು ಬಳಸುವ ಟೇಬಲ್ ಮತ್ತು ಚೇರ್‌ಗಳಲ್ಲಿ ಅಡಗಿಸಿಟ್ಟು ತಂದಿದ್ದರು. ಗಿಫ್ಟ್ ರೀತಿಯಲ್ಲಿ ಪ್ಯಾಕ್ ಮಾಡಿ ಅವುಗಳನ್ನು ಸಾಗಾಟ ಮಾಡಿದ್ದರು. ರೈಲಲ್ಲಿ ಸಾಗಿಸಿ ತಂದಿದ್ದ ಈ ಮಾದಕ ವಸ್ತುಗಳನ್ನು ಕಾರಿಗೆ ಶಿಫ್ಟ್ ಮಾಡುವ ವೇಳೆ



ದಾಳಿ ನಡೆಸಿರುವ ಪೊಲೀಸರು 4 ಕೆಜಿ 300 ಗ್ರಾಂ ಎಂಡಿಎಂಎಯನ್ನು ವಶಕ್ಕೆ ಪಡೆದಿದ್ದಾರೆ. ವಿಚಾರಣೆ ವೇಳೆ ಸರ್ಜಾಪುರದ ಮನೆಯೊಂದರಲ್ಲಿ ಚಾಕಿ ಡ್ರಗ್ಸ್ ಇಟ್ಟಿರುವ ಮಾಹಿತಿ ಸಿಕ್ಕಿ ಹಿನ್ನೆಲೆ ಬೆಂಗಳೂರಿನ ಪೆಡ್ಲರ್ ಮನ್ಸೂರ್ ನಿವಾಸದಲ್ಲಿ ದಾಳಿ ನಡೆಸಲಾಗಿತ್ತು ರೇಡ್ ವೇಳೆ ಮನೆಯಲ್ಲಿ 10 ಕೆಜಿ ಎಂಡಿಎಂಎ ಪತ್ತೆಯಾಗಿದೆ. ಬಳಿಕ ಅಬ್ದುಲ್ ಸಮಾದ್ ನಿವಾಸದಲ್ಲಿಯೂ ಡ್ರಗ್ಸ್ ಇರುವ ಬಗ್ಗೆ ಮಾಹಿತಿ ಆಧಾರದಲ್ಲಿ ಆತನ ಹೆಣ್ಣೂರು ನಿವಾಸದಲ್ಲಿ ತಪಾಸಣೆ ನಡೆಸಿದಾಗ 3.5 ಕೆಜಿ ಎಂಡಿಎಂಎ ಸಿಕ್ಕಿದೆ. ಆ ಮೂಲಕ ಒಟ್ಟು 34 ಕೋಟಿ ಮೌಲ್ಯದ 17 ಕೆಜಿಗೂ ಹೆಚ್ಚಿನ ಎಂಡಿಎಂಎ ಡ್ರಗ್ಸ್ ವಶಕ್ಕೆ ಪಡೆಯಲಾಗಿದೆ.

ಇನ್ನು ಉತ್ತರ ಭಾರತ ಅಥವಾ ವಿದೇಶದಿಂದ ದೆಹಲಿಗೆ ಬರುತ್ತಿದ್ದ ಡ್ರಗ್ಸ್‌ನ ಅಲ್ಲಿಂದ ದೇಶದ ವಿವಿಧ ಭಾಗಕ್ಕೆ ಆರೋಪಿಗಳು ಸರಬರಾಜು ಮಾಡುತ್ತಿದ್ದರು. ಸೆನೆಗಲ್‌ನ ಡನ್ನಾ ಗೆರಾಲ್ಡ್, ತಾಂಜೇನಿಯಾದ ಮೆಗ್ರಾತ್ ಮತ್ತು ಲೈಬೇರಿಯಾ ಮೂಲದ ಬಿಬಿಯಾನಿಷ್ ರೀಟಾ ದೆಹಲಿಯ ಡೀಲರ್‌ಗಳಾಗಿದ್ದರೆ, ದೆಹಲಿ ಮೂಲದ ರೀನಾ ಯಾದವ್, ದೀಪಿಶ್ ಬ್ಯಾನರ್ಜಿ ಮತ್ತು ಧೀರಜ್ ಬೆಂಗಳೂರಿನ ಟ್ರಾನ್ಸ್‌ಪೋರ್ಟರ್‌ಗಳಾಗಿ ಕೆಲಸ ಮಾಡುತ್ತಿದ್ದರು. ಮಂಗಳೂರು ಮೂಲದ ಬೆಂಗಳೂರು ನಿವಾಸಿಗಳಾಗಿರುವ ಮಹಮ್ಮದ್ ಮನ್ಸೂರ್ ಮತ್ತು ಅಬ್ದುಲ್ ಸಮಾದ್ ಬೆಂಗಳೂರಲ್ಲಿ ಪೆಡ್ಲರ್ಸ್‌ಗಳಾಗಿದ್ದರು ಎಂಬುದು ತಿಳಿದುಬಂದಿದೆ. ಯಶವಂತಪುರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಕಳೆದ ಒಂದು ತಿಂಗಳಲ್ಲಿ ಐದು ಕೇಸ್ ದಾಖಲಾಗಿತ್ತು ಈ ಸಂಬಂಧ ಒಟ್ಟು 9 ಜನರನ್ನು ಪೊಲೀಸರು ಬಂಧಿಸಿದ್ದರು. ಆರೋಪಿಗ ವಿಚಾರಣೆ ವೇಳೆ ಡ್ರಗ್ಸ್ ಜಾಲದ ಮುಂಬಿನ ಲೇಯರ್ ಪತ್ತೆಯಾಗಿತ್ತು ಆ ಮಾಹಿತಿ ಆಧಾರದಲ್ಲಿ ಹೆಬ್ಬಾಳ ಪೊಲೀಸ್ ಠಾಣೆಯಲ್ಲಿ ಕೇಸ್ ದಾಖಲಾಗಿತ್ತು. ದೆಹಲಿ ಮತ್ತು ದೆಹಲಿ ಎನ್‌ಸಿಆರ್‌ನಲ್ಲಿ ಬೆಂಗಳೂರು ಉತ್ತರ ವಿಭಾಗದ ಪೊಲೀಸರು ಕಾರ್ಯಾಚರಣೆ ನಡೆಸಿದ್ದರು. ಇದಕ್ಕಾಗಿ ಹೆಬ್ಬಾಳ ಮತ್ತು ಉತ್ತರ ವಿಭಾಗದ ಸುಮಾರು ನಲವತ್ತು ಪೊಲೀಸರನ್ನೊಳಗೊಂಡ ತಂಡ ರಚನೆ ಮಾಡಲಾಗಿತ್ತು ತಂಡ ಕಳೆದ ಒಂದು ತಿಂಗಳಿಂದ ಈ ಕುರಿತು ಕೆಲಸ ಮಾಡಿದ್ದು ಡ್ರಗ್ಸ್ ಸರಬರಾಜು ಮಾಡುತ್ತಿದ್ದವರು ಮತ್ತು ಪೆಡ್ಲರ್ಸ್‌ಗಳನ್ನು ಹಂತ ಹಂತವಾಗಿ ಅರೆಸ್ಟ್ ಮಾಡಲಾಗಿದೆ.











ಪ್ರೀತಿಯ ನೆಚ್ಚಿನ ಓದುಗ ಮಿತ್ರರೇ ಸೂರ್ಯಪ್ರಗತಿ ಕನ್ನಡ ದಿನಪತ್ರಿಕೆಯ ಸುದ್ದಿಗಳನ್ನ ಅಂತರ್ಜಾಲ ತಾಣ ವೆಬ್ ಆವೃತ್ತಿ https://suryapragathi.com ನಲ್ಲಿ ಹಾಗೂ https://epaper.suryapragathi.com ನಲ್ಲಿ ಓದಬಹುದು – ನೋಡಬಹುದು ಹೆಚ್ಚಿನ ಮಾಹಿತಿಗಾಗಿ 9901010109

ರಾಮನಗರ ಸುದ್ದಿ ಕಾರ್ನರ್

ರಾಮನಗರ ಜಿಲ್ಲೆಯ ಎಲ್ಲಾ ತಾಲ್ಲೂಕು ಹಾಗೂ ವಿಶೇಷ ಸುದ್ದಿಗಾಗಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
ಬಿಡದಿ ಮಹೇಶ್ : ವರದಿಗಾರರು 99728 34055

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ
ಜಾಹೀರಾತಿಗಾಗಿ ಸಂಪರ್ಕಿಸಿ: 9901010109

Multimedia solutions GRAPHIC STUDIO 9535818629

ಅಖಿಲ ಭಾರತ ಔಷಧ ವ್ಯಾಪಾರಿಗಳ ಸಂಘದಿಂದ ದೇಶಾದ್ಯಂತ ಮುಷ್ಕರಕ್ಕೆ ಕರೆ

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು – ಜನರ ಆರೋಗ್ಯದ ದೃಷ್ಟಿಯಿಂದ ಮತ್ತು ಔಷಧ ವ್ಯಾಪಾರಿಗಳು ಎದುರಿಸುತ್ತಿರುವ ಸಂಕಷ್ಟಗಳ ಬಗ್ಗೆ ಕೇಂದ್ರ ಸರ್ಕಾರದ ಗಮನ ಸೆಳೆಯುವ ಸಲುವಾಗಿ ಅಖಿಲ ಭಾರತ ಔಷಧ ವ್ಯಾಪಾರಿಗಳ ಸಂಘ ಇಂದು ದೇಶಾದ್ಯಂತ ಮುಷ್ಕರಕ್ಕೆ ಕರೆ ನೀಡಿರುವ ಹಿನ್ನೆಲೆಯಲ್ಲಿ ನಗರ ಸೇರಿದಂತೆ ಜಿಲ್ಲೆಯಾದ್ಯಂತ ಔಷಧ ವ್ಯಾಪಾರಿಗಳು ಅಂಗಡಿಗಳನ್ನು ಬಂದ್ ಮಾಡಿ ಬೆಂಬಲ ವ್ಯಕ್ತಪಡಿಸಿದ್ದಾರೆ.

ನಗರ ಸೇರಿದಂತೆ ಜಿಲ್ಲೆಯಾದ್ಯಂತ ಮೆಡ್‌ಪ್ಲಸ್ ಮತ್ತು ಅಪೋಲೋ ಮೆಡಿಕಲ್ ಸ್ಟೋರ್‌ಗಳನ್ನು ಹೊರತುಪಡಿಸಿ ಉಳಿದಂತೆ ಎಲ್ಲಾ ಖಾಸಗಿ ಔಷಧಿ ಅಂಗಡಿಗಳು ಬಂದ್ ಆಗಿವೆ.ನಗರದ ಟೌನ್‌ಹಾಲ್ ವೃತ್ತದಲ್ಲಿ ಜಿಲ್ಲಾ ಔಷದ ವ್ಯಾಪಾರದ ಸಂಘದ ಅಧ್ಯಕ್ಷರಾದ ಎನ್. ಎಸ್ ಪಂಡಿತ್ ಜವಾಹರ್ ನೇತೃತ್ವದಲ್ಲಿ ಸಮಾವೇಶಗೊಂಡ ಔಷಧ ವ್ಯಾಪಾರಿಗಳ ಸಂಘದ ಪದಾಧಿಕಾರಿಗಳು ತಮ್ಮ ಬೇಡಿಕೆಯನ್ನು ಈಡೇರಿಸುವಂತೆ ಒತ್ತಾಯಿಸಿದರು.

ಔಷಧ ವ್ಯಾಪಾರವು ಇಂದು ಅನಿರೀಕ್ಷಿತ ಸಂಕಷ್ಟಗಳನ್ನು ಎದುರಿಸುತ್ತಿದೆ, ಇದನ್ನು ಸರಿಪಡಿಸಲು ಸರ್ಕಾರದ ಮೇಲೆ



ಒತ್ತಡ ಹೇರುವುದು ಅತ್ಯಗತ್ಯವಾಗಿದೆ. ಹಾಗಾಗಿ ಇಂದು ಔಷಧ ವ್ಯಾಪಾರ ಬಂದ್ ಮಾಡಿ ಮುಷ್ಕರ ನಡೆಸಲಾಗುತ್ತಿದೆ ಎಂದು ಸಂಘದ ಜಿಲ್ಲಾಧ್ಯಕ್ಷ ಎನ್.ಎಸ್. ಪಂಡಿತ್ ಜವಾಹರ್ ಹೇಳಿದರು.

ಸರ್ಕಾರ ಅಮೆಜಾನ್, ಸ್ವಿಗ್ಗಿ, ಫ್ಲಿಪ್‌ಕಾರ್ಟ್ ಸೇರಿದಂತೆ ಹಲವು ಆನ್‌ಲೈನ್ ವೇದಿಕೆಗಳಿಗೆ ಔಷಧ ಮಾರಾಟ ಲೈಸೆನ್ಸ್ ನೀಡಿದೆ. ಆನ್‌ಲೈನ್ ಮೂಲಕ ಔಷಧಗಳು ಸುಲಭವಾಗಿ ಯುವ ಜನತೆಗೆ ತಲುಪುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ. ಆನ್‌ಲೈನ್ ಮೂಲಕ ನಡೆಯುತ್ತಿರುವ ಔಷಧ ವ್ಯಾಪಾರವನ್ನು ತಕ್ಷಣ ನಿಲ್ಲಿಸಬೇಕು.ಕೋವಿಡ್ ಅವಧಿಯಲ್ಲಿ ಕೇಂದ್ರಸರ್ಕಾರ ಹೊರಡಿಸಿದ್ದ ಜಿ.ಎಸ್.ಆರ್ 817 (20–08–2018) ಹಾಗೂ ಜಿ.ಎಸ್.ಆರ್ 220 (26–03–2020) ಆದೇಶಗಳನ್ನು ಹಿಂಪಡೆಯಬೇಕು ಎಂದು ಒತ್ತಾಯಿಸಿದರು.

ಡ್ರಗ್ಸ್ ಅಂಡ್ ಕಾಸ್ಮೆಟಿಕ್ಸ್ ಆಕ್ಟ್ ಹಾಗೂ ಔಷಧ ಬೆಲೆ ನಿಯಂತ್ರಣ ಕಾನೂನುಗಳಡಿ ಔಷಧ ವ್ಯಾಪಾರಿಗಳಿಗೆ ಶೇ. 16 ರಷ್ಟು ಲಾಭಾಂಶ ನಿಗದಿಯಾಗಿದ್ದು, ಖರ್ಚು ವೆಚ್ಚ ಹೆಚ್ಚುತ್ತಿರುವ ಹಿನ್ನೆಲೆ ಮಾರ್ಜಿನ್ ಹೆಚ್ಚಿಸಬೇಕು ಎಂದು ಔಷಧ ವ್ಯಾಪಾರಿಗಳು ಕೇಂದ್ರಸರ್ಕಾರವನ್ನು ಆಗ್ರಹಿಸಿದರು. ಮೂಲ ಕಂಪನಿಗಳ ಔಷಧಗಳಿಗೆ ಹೋಲುವಂತೆ ನಕಲಿ ಔಷಧ ತಯಾರಿಸಿ ಕಡಿಮೆ ಬೆಲೆಗೆ ಮಾರಾಟ ಮಾಡಲಾಗುತ್ತಿದ್ದು, ಇವು ಆರೋಗ್ಯಕ್ಕೆ ಗಂಭೀರ ಹಾನಿ ಉಂಟು ಮಾಡುತ್ತಿವೆ. ಇಂತಹ ಔಷಧಗಳಿಂದ ಕಿಡ್ನಿ, ಹೃದಯ ಸೇರಿದಂತೆ ಹಲವು ಅಂಗಾಂಗಗಳಿಗೆ ಹಾನಿಯಾಗುವ ಸಾಧ್ಯತೆ ಇದೆ. ಸ್ಪೂರಿಯಸ್ ಡ್ರಗ್ಸ್‌ಗಳ ನಿಯಂತ್ರಣ ಹಾಗೂ ಸುರಕ್ಷಿತ ಔಷಧ ವಿತರಣೆಗಾಗಿ ಕೇಂದ್ರ ಸರ್ಕಾರ ಕಠಿಣ ಮತ್ತು ಸರಳ ಕಾನೂನು ಜಾರಿಗೆ ತರಬೇಕು ಎಂದರು.

ಔಷಧ ವ್ಯಾಪಾರಿಗಳು ಸಾರ್ವಜನಿಕರಿಗೆ ಮತ್ತು ರೋಗಿಗಳಿಗೆ ತೊಂದರೆ ನೀಡುವ ಉದ್ದೇಶ ಹೊಂದಿಲ್ಲ, ಆದರೆ ತಮ್ಮ ಅಸ್ತಿತ್ವ ಮತ್ತು ಸಮಾಜದ ಹಿತದೃಷ್ಟಿಯಿಂದ ಈ ಹೋರಾಟ ಅನಿವಾರ್ಯವಾಗಿದೆ ಎಂದರು.

ಔಷಧ ವ್ಯಾಪಾರಿಗಳ ಮುಷ್ಕರದ ಮಾಹಿತಿ ತಿಳಿಯದ ರೋಗಿಗಳು ಹಾಗೂ ಸಾರ್ವಜನಿಕರು ಮೆಡಿಕಲ್ ಸ್ಟೋರ್‌ಗಳಿಗೆ ಔಷಧಿ ಖರೀದಿಗಾಗಿ ತೆರಳಿ ಬಾಗಿಲು ಬಂದ್ ಆಗಿರುವುದನ್ನು ವಾಪಸ್ಸಾಗುತ್ತಿದ್ದ ದೃಶ್ಯಗಳು ಕಂಡು ಬಂದವು. ಪ್ರತಿಭಟನೆಯಲ್ಲಿ ಸಂಘದ ಉಪಾಧ್ಯಕ್ಷ ರಂಗಸ್ವಾಮಿ, ಕಾರ್ಯದರ್ಶಿ ವಿಜಯ್, ಜಂಟಿ ಕಾರ್ಯದರ್ಶಿ ನಾರಾಯಣಮೂರ್ತಿ, ಗೋಪಾಲ್, ರಾಮಚಂದ್ರ, ಶ್ಯಾಮ್ ಸುಂದರ್, ಸ್ವಾಮಿ ಸೇರಿದಂತೆ ಔಷಧ ವ್ಯಾಪಾರಿಗಳು ಪಾಲ್ಗೊಂಡಿದ್ದರು.



ತುಮಕೂರು ನಗರದ ಎನ್‌ಆರ್ ಕಾಲೋನಿಯಲ್ಲಿರುವ ದುರ್ಗಮ್ಮ, ದಾಳಮ್ಮ, ಪೂಜಮ್ಮ ಗ್ರಾಮದೇವತೆಗಳ ಜಾತ್ರಾ ಮಹೋತ್ಸವದಂದು ಬುಧವಾರದಂದು ಉತ್ಸವದ ಮೆರವಣಿಗೆಗೆ ಗೃಹ ಸಚಿವ ಹಾಗೂ ತುಮಕೂರು ಜಿಲ್ಲಾ ಉಸ್ತುವಾರಿ ಸಚಿವ ಡಾ. ಜಿ. ಪರಮೇಶ್ವರ ಅವರು ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಮುಖಂಡರುಗಳಾದ ಪ್ರಗತಿಪರ ಚಿಂತಕ ದೊರೈರಾಜು, ವಾಲೆ ಚಂದ್ರಯ್ಯ, ನರಸಿಂಹಯ್ಯ, ಹೆಚ್.ಆರ್. ಹನುಮಂತರಾಯಪ್ಪ, ಕಿರಣ್, ರಘು, ಮೋಹನ್ ಕುಮಾರ್, ರಾಜಣ್ಣ, ರಮೇಶ್ ಮುಂತಾದವರಿದ್ದರು. ಇದೇ ಸಂದರ್ಭದಲ್ಲಿ ಸಚಿವರನ್ನು ಸನ್ಮಾನಿಸಲಾಯಿತು. ಜಿಲ್ಲಾ ಎಸ್‌ಪಿ ಅಶೋಕ್ ಕೆ.ವಿ., ಸಿಪಿಐ ಅವಿನಾಶ್, ರಾಘವೇಂದ್ರ ಉಪಸ್ಥಿತರಿದ್ದರು. ವಿವಿಧ ಕಲಾ ತಂಡಗಳು ಈ ಉತ್ಸವದಲ್ಲಿ ಪಾಲ್ಗೊಂಡಿದ್ದರು.

ಜ್ಞಾನ, ಸಾಮರ್ಥ್ಯದಿಂದ ಯಶಸ್ಸು



ತುಮಕೂರು: ವೃತ್ತಿ ಮತ್ತು ವ್ಯಾಪಾರದಲ್ಲಿ ಯಶಸ್ಸು ಕಾಣಬೇಕಾದರೆ ಬುದ್ಧಿ, ಜ್ಞಾನ, ಕೌಶಲ್ಯ ಮತ್ತು ಸಾಮರ್ಥ್ಯ ಮುಖ್ಯವಾಗಿದೆ ಎಂದು ಬೆಂಗಳೂರಿನ ನಿಟ್ಟೆ ಸ್ಕೂಲ್ ಆಫ್ ಮ್ಯಾನೇಜ್ಮೆಂಟ್ ನಿರ್ದೇಶಕರಾದ ಡಾ.ಗುರುರಾಜ್.ಬಿ. ಅರಸ್‌ರವರು ಅಭಿಪ್ರಾಯಪಟ್ಟಿದ್ದಾರೆ.

ನಗರದ ಶ್ರೀದೇವಿ ತಾಂತ್ರಿಕ ಮಹಾವಿದ್ಯಾಲಯದ ಎಂ.ಬಿ.ಎ. ವಿಭಾಗದ ವತಿಯಿಂದ ಪದವಿ ವಿದ್ಯಾರ್ಥಿಗಳಿಗಾಗಿ "ಬಿಸಿನೆಸ್ ಟ್ಯಾಲೆಂಟ್ ಹಂಟ್" (Business Talent Hunt)– ಬಿಜ್ ಕ್ವಿಜ್ ರಸಪ್ರಶ್ನೆ, ವ್ಯವಹಾರ ಯೋಜನೆ, ನಿಧಿ ಹುಡುಕಾಟ, ಪಾತ್ರಾಭಿನಯ ಸ್ಪರ್ಧೆಯನ್ನು ಶ್ರೀದೇವಿ ಆಸ್ಪತ್ರೆಯ ಆಡಿಟೋರಿಯಂ ಸಭಾಂಗಣದಲ್ಲಿ ಮೇ20 ರಂದು ಬುಧವಾರ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಶ್ರೀದೇವಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾದ ಡಾ.ಎಂ.ಆರ್. ಹುಲಿನಾಯ್ಕರ್‌ರವರು ಮಾತನಾಡುತ್ತಾ ವಾಣಿಜ್ಯ ರಂಗದಲ್ಲಿ ಯಶಸ್ಸು ಕಾಣಲು ಬೇಕಾದ ವಾತಾವರಣ ಇಂದು ನಿರ್ಮಾಣವಾಗಿದೆ ದೇಶದ ಅನೇಕ ನಗರಗಳಲ್ಲಿ ಬಿಸಿನೆಸ್ ಶಾಲೆಗಳು ಆರಂಭವಾಗಿದೆ. ಹಿಂದೆ ಇಂತಹ ಪರಿಸ್ಥಿತಿ ಇರಲಿಲ್ಲ. 1991ರಲ್ಲಿ ದೇಶದ ಆರ್ಥಿಕ ಪರಿಸ್ಥಿತಿ ತೀರ ಹದಗೆಟ್ಟು ಸಂಬಳ ಕೊಡಲು ಕಷ್ಟಕರವಾಗಿದ್ದ ಸನ್ನಿವೇಶದಲ್ಲಿ ಆರ್ಥಿಕ ಉದಾರಿಕರಣ ನೀತಿಯಿಂದ ಅಂದಿನ ಹಣಕಾಸು ಸಚಿವ ಡಾ. ಮನಮೋಹನ್ ಸಿಂಗ್ ದೇಶವನ್ನು ಸಂಕಷ್ಟದಿಂದ ಪಾರು ಮಾಡಿದರು ಎಂದು ಹೇಳಿದರು.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ
ಜಾಹೀರಾತಿಗಾಗಿ ಸಂಪರ್ಕಿಸಿ: 9901010109



ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವರು ಭಾರತ ಸರ್ಕಾರ ಹಾಗೂ ಬಿಜೆಪಿ ಮಾಜಿ ರಾಷ್ಟ್ರೀಯ ಅಧ್ಯಕ್ಷರಾದ ಶ್ರೀ ನಿತಿನ್ ಗಡ್ಕರಿ ಅವರನ್ನು ತುಮಕೂರು ಬಿಜೆಪಿ ಖಜಾಂಚಿ ಅಕ್ಷಯ್ ಚೌಧರಿ ಅವರು ನವದೆಹಲಿಯ ಅವರ ಸರ್ಕಾರಿ ನಿವಾಸದಲ್ಲಿ ಸೌಜನ್ಯಯುತವಾಗಿ ಭೇಟಿ ಮಾಡಿದರು ಈ ಸಂದರ್ಭದಲ್ಲಿ ಸಚಿವರಿಗೆ ಹೂಗುಚ್ಛ ನೀಡಿ ಅಭಿನಂದಿಸಿದರು.



ಸೂರ್ಯಪ್ರಗತಿನ್ಯೂಸ್.ಕಾಂ

ಮಧುಗಿರಿ ತಾಲ್ಲೂಕಿನ ಕೊಡಿಗೇನಹಳ್ಳಿ ಹೋಬಳಿಯ ಚಿಕ್ಕ ಮಾಲೂರು ಗ್ರಾಮದ ಪರಿಶಿಷ್ಟ ವರ್ಗಗಳ ಬಾಲಕರ ವಿದ್ಯಾರ್ಥಿ ನಿಲಯದಲ್ಲಿ ಸುಮಾರು 70 ಲಕ್ಷ ರೂಪಾಯಿ ವೆಚ್ಚದಲ್ಲಿ ಹೆಚ್ಚುವರಿ ಕಟ್ಟಡಗಳಿಗೆ ಶಾಸಕ ಕೆ.ಎನ್.ರಾಜಣ್ಣ ಗುದ್ದಲಿ ಪೂಜಾ ಕಾರ್ಯಕ್ರಮ ನೆರವೇರಿಸಲಾಯಿತು.

ಈ ಸಂದರ್ಭದಲ್ಲಿ ಉಪವಿಭಾಗಾಧಿಕಾರಿ ಗೋಟೂರು ಶಿವಪ್ಪ, ಎಡಿ ಧನಂಜಯ್, ಸಹಾಯಕ ನಿರ್ದೇಶಕರಾದ ಡಾ. ದಿನೇಶ್, ವಾರ್ಡನ್ ಚಂದ್ರಶೇಖರ ರೆಡ್ಡಿ, ಕ.ರಾ.ವೆ. ತಾಲ್ಲೂಕು ಅಧ್ಯಕ್ಷರಾದ ಶಿವಕುಮಾರ್ ಹಾಗೂ ಸ್ಥಳೀಯ ಹಾಗೂ ತಾಲ್ಲೂಕು ಮಟ್ಟದ ಮುಖಂಡರುಗಳು, ಅಧಿಕಾರಿಗಳು, ಸಾರ್ವಜನಿಕರು, ಭಾಗವಹಿಸಿದ್ದರು.

ಸಮುದಾಯದ ಪ್ರಗತಿಗೆ ಯುವಜನತೆ ಶಕ್ತಿ

ಸೂರ್ಯಪ್ರಗತಿನ್ಯೂಸ್.ಕಾಂ



ಸಣ್ಣ ಸಮುದಾಯಗಳ ಸಮಗ್ರ ಅಭಿವೃದ್ಧಿಗೆ ಯುವಜನತೆ ಸಂಘಟಿತರಾಗಬೇಕು ಎಂದು ಕರ್ನಾಟಕ ರಾಜ್ಯ ಅಗ್ನಿವಂಶ ಕ್ಷತ್ರಿಯ ತಿಗಳ ಯೂತ್ ಫೋರ್ಸ್ ಅಧ್ಯಕ್ಷ ಮಾರುತಿ ಕೆ ಆರ್ ಅಭಿಪ್ರಾಯಪಟ್ಟರು.

ತುಮಕೂರು ನಗರದಲ್ಲಿ ನಡೆದ ಕರ್ನಾಟಕ ರಾಜ್ಯ ಅಗ್ನಿವಂಶ ಕ್ಷತ್ರಿಯ ತಿಗಳ ಯೂತ್ ಫೋರ್ಸ್ ರಾಜ್ಯ ಕಾರ್ಯಕಾರಿಣಿ ಮತ್ತು ಪುನಶ್ಚೇತನ ಕಾರ್ಯಾಗಾರದಲ್ಲಿ ಮಾತನಾಡಿದ ಅವರು,ಅಗ್ನಿವಂಶ ಕ್ಷತ್ರಿಯ ತಿಗಳ ಸಮುದಾಯದ ಮಕ್ಕಳಲ್ಲಿ ಶಿಕ್ಷಣ, ರಾಜಕೀಯ, ಸಂವಿಧಾನ ಪ್ರಜ್ಞೆ ಕಟ್ಟಬೇಕು. ಸಮುದಾಯವನ್ನು ಸಂಘಟಿಸುತ್ತ ಇತರ ಸಮುದಾಯದ ಜೊತೆ ಮೈತ್ರಿ ಮಾಡಿಕೊಂಡು ಹೊಸ ಮಾದರಿಯ ಸಂಘಟನೆ ಕಟ್ಟಬೇಕು. ಸರ್ಕಾರದ ಮಟ್ಟದಲ್ಲಿ ನ್ಯಾಯ ಸಮ್ಮತ ಅವಕಾಶ ಪಡೆಯಬೇಕಾದರೆ ತಳ ಮಟ್ಟದಲ್ಲಿ ಜಾಗೃತಿ ಮೂಡಿಸಬೇಕು. ನಮ್ಮ ಒಗ್ಗೂಡುವಿಕೆಯೆ ನಮಗೆ ಶಕ್ತಿ ಎಂದರು

ಕರ್ನಾಟಕ ರಾಜ್ಯ ಅಗ್ನಿವಂಶ ಕ್ಷತ್ರಿಯ ತಿಗಳ ಯೂತ್ ಫೋರ್ಸ್ ಸಂಘನೆಯಿಂದ ರಾಜ್ಯದ್ಯಂತ ನಿರಂತರ ಐದು ವರ್ಷದಿಂದ ಸಮುದಾಯವನ್ನು ಸಂಘಟಿಸುತ್ತಾ ಸಾಮಾಜಿಕ, ಶೈಕ್ಷಣಿಕವಾಗಿ, ಆರ್ಥಿಕ, ಸಾಂಸ್ಕೃತಿಕ ಕಾರ್ಯಕ್ರಮ ರೂಪಿಸುತ್ತ ಬಂದಿದ್ದೇವೆ. ಇದಕ್ಕೆ ಎಲ್ಲರ ಸಹಕಾರ ಬೇಕು ಎಂದರು

ತುಮಕೂರು ಮಹಾನಗರ ಪಾಲಿಕೆ ಮಾಜಿ ಸದಸ್ಯ ಶ್ರೀನಿವಾಸ್ ಮಾತನಾಡಿ ರಾಜಕೀಯ ಪಕ್ಷ ಮತ್ತು ಸಿದ್ಧಾಂತ ಮೀರಿ ಸಮುದಾಯದ ಅಭಿವೃದ್ಧಿ ವಿಷಯಕ್ಕೆ ಒಂದಾಗಬೇಕು. ಜನರಲ್ಲಿ ಅರಿವಿನ ಪ್ರಜ್ಞೆ ಮೂಡಿಸಬೇಕು ಎಂದರು.ಇದೇ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಅಗ್ನಿವಂಶ ಕ್ಷತ್ರಿಯ ತಿಗಳ ಯೂತ್ ಫೋರ್ಸ್ ಪ್ರಧಾನ ಕಾರ್ಯದರ್ಶಿ ಮಂಜುನಾಥ್ ಹೆಚ್ ಆರ್, ಖಜಾಂಚಿ ಲೋಕೇಶ್ ನೈದಿಲೆ, ಮಹಿಳಾ ಘಟಕದ ಅಧ್ಯಕ್ಷರು ನವಿತಾ ರವಿಕುಮಾರ್, ಪ್ರಧಾನ ಕಾರ್ಯದರ್ಶಿ ಲತಾ ರಘು, ಪ್ರಚಾರ ಸಮಿತಿ ಅಧ್ಯಕ್ಷರು ರವಿ ಅಗ್ನಿ, ಹರೀಶ್, ತಿಪ್ಪೇಶ್,ಆನಂದ್, ರಾಜು ಕಲೆಗಾರ ವಕೀಲ ದಯಾನಂದ ಸಾಗರ್ ಭಾನುಪ್ರಕಾಶ್ ಹಾಗೂ ಸಂಘಟನೆಯ ಪದಾಧಿಕಾರಿಗಳು ಭಾಗವಹಿಸಿದ್ದರು

ಬಡ ಜನರ ಆರೋಗ್ಯ ಸುಧಾರಣೆಗಾಗಿ ಆರೋಗ್ಯ ತಪಾಸಣೆ ಶಿಬಿರ

ಸೂರ್ಯಪ್ರಗತಿನ್ಯೂಸ್.ಕಾಂ



ಕೊರಟಗೆರೆ: ಬಡ ಜನರ ಆರೋಗ್ಯ ಸುಧಾರಣೆಗಾಗಿ ಆರೋಗ್ಯ ತಪಾಸಣೆ ಶಿಬಿರ ಆಯೋಜಿಸಲಾಗಿದೆಎಂದು ಸಮಾಜ ಸೇವಕ ಸದಾನಂದ ತಿಳಿಸಿದರು.

ನಗರದ ಕಾಳಿದಾಸ ಬಡವಾಣೆ ನಯಾಜ್ ನ್ಯಾಯಬೆಲೆ ಮುಂಭಾಗದಲ್ಲಿ ಸಮಾಜ ಸೇವಕ ಸದಾನಂದ ಮತ್ತು ನಯಾಜ್ ಆಹಮದ್ ಸಹಕಾರದಿಂದ ವೆಡ್ಸ್ ಎನ್‌ಜಿಒ ಸಂಸ್ಥೆ ಮತ್ತು ಕೊರಟಗೆರೆ ಸಾರ್ವಜನಿಕ ಆಸ್ಪತ್ರೆ ವೈದ್ಯರ ಸಹಯೋಗದಲ್ಲಿ ಆಯೋಜಿಸಿದ್ದಉಚಿತ ಆರೋಗ್ಯ ತಪಾಸಣಾ ಶಿಬಿರ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ವೆಡ್ಸ್ ಎನ್‌ಜಿಒ ಸಂಸ್ಥೆ ಮತ್ತು ಕೊರಟಗೆರೆ ಸರ್ಕಾರಿ ಆಸ್ಪತ್ರೆ ವೈದ್ಯರ ಸಹಯೋಗದಲ್ಲಿ ಆರೋಗ್ಯ ತಪಾಸಣಾ ಶಿಬಿರನಡೆಯುತ್ತಿದೆ. ವೈದ್ಯರ ಪರೀಕ್ಷೆಯ ನಂತರ ನೀಡಿರುವ ಔಷಧಿಯನ್ನು ಸಮಯಕ್ಕೆ ಸರಿಯಾಗಿ ಸೇವಿಸಿ ಆರೋಗ್ಯಕಾಪಾಡಿಕೊಳ್ಳಬೇಕು ಎಂದು ರೋಗಿಗಳಿಗೆ ತಿಳಿಸಿದರು.

ಸಮಾಜ ಸೇವಕ ನಯಾಜ್ ಮಾತನಾಡಿ, ಕೊರಟಗೆರೆ ನಗರ ಪ್ರದೇಶದಲ್ಲಿ ಇಂದಿಗೂ ಕೂಲಿ ಕಾರ್ಮಿಕರು, ಬಡ ಜನರೇ ಹೆಚ್ಚಾಗಿ ವಾಸಿಸುತ್ತಿದ್ದಾರೆ, ಅವರ ಆರೋಗ್ಯ ಸುಧಾರಣೆಗೆ ಅನುಕೂಲವಾಗಲೆಂದು ಆರೋಗ್ಯ ತಪಾಸಣೆ ಶಿಬಿರವನ್ನು ಪ್ರತಿವರ್ಷ ನಡೆಸಿಕೊಂಡು ಬರುತ್ತಿದ್ದೇವೆ ಎಂದು ಹೇಳಿದರು. ಈ ವೇಳೆ ಸರ್ಕಾರಿ ಆಸ್ಪತ್ರೆ ವೈದ್ಯಾಧಿಕಾರಿ ಡಾ.ಪುರುಷೋತ್ತಮ್ ನಾಯಕ್ ಸೇರಿದಂತೆ ನಮ್ಮ ಕ್ಲಿನಿಕ್ ವೈದ್ಯರ ತಂಡ ಉಪಸ್ಥಿತರಿದ್ದರು.

ರೈಲ್ವೆ ಪ್ರಯಾಣಿಕರ ಕುಂದು ಕೊರತೆ ನಿವಾರಿಸಲು ಮನವಿ; ರೈಲ್ವೆ ಬಳಕೆದಾರರ ಸಲಹಾ ಸಮಿತಿ ಸಚಿವರಿಗೆ ಕೋರಿಕೆ

ಸೂರ್ಯಪ್ರಗತಿನ್ಯೂಸ್.ಕಾಂ



ತುಮಕೂರು: ದಿನ ನಿತ್ಯ ರೈಲಿನಲ್ಲಿ ಸಂಚಾರ ಮಾಡುವ ತುಮಕೂರು ಜಿಲ್ಲೆಯ ನಾಗರಿಕರು, ವ್ಯಾಪಾರಸ್ಥರು, ಕೈಗಾರಿಕಾ ಉದ್ಯಮಿಗಳು, ಉದ್ಯೋಗಸ್ಥರು, ಪ್ರಯಾಣಿಕರ ಕುಂದು ಕೊರತೆ ಬಗ್ಗೆ ಬೆಂಗಳೂರು ವಲಯ ರೈಲ್ವೆ ಬಳಕೆದಾರರ ಸಲಹಾ ಸಮಿತಿ ಸಭೆಯಲ್ಲಿ ಅಧಿಕಾರಿಗಳ ಜೊತೆ ಚರ್ಚಿಸಿ, ಸಮಸ್ಯೆ ನಿವಾರಣೆಗೆ ಸಚಿವರಿಗೆ ಮನವಿ ಮಾಡಲಾಯಿತು. ವಲಯ ರೈಲ್ವೆ ಅಧಿಕಾರಿ ಅಸುತೋಷ ಕುಮಾರ್ ಸಿಂಗ್ ಅಧ್ಯಕ್ಷತೆಯಲಿ ಬುಧವಾರ ಬೆಂಗಳೂರಿನಲ್ಲಿ ನಡೆದ ಸಭೆಯಲ್ಲಿ ಪ್ರಯಾಣಿಕರ ಕುಂದು ಕೊರತೆ ಹಾಗೂ ಜಿಲ್ಲೆಯ ರೈಲ್ವೆಯ ವಿವಿಧ ಯೋಜನೆಗಳ ಬಗ್ಗೆ ಚರ್ಚಿಸಲಾಯಿತು ಹಾಗೂ ಈ ಸಂಬಂಧಕೇಂದ್ರ ಜಲಶಕ್ತಿ ಹಾಗೂ ರೈಲ್ವೆಖಾತೆರಾಜ್ಯ ಸಚಿವ ವಿ.ಸೋಮಣ್ಣ ಅವರಿಗೆ ಮನವಿ ಮಾಡಲಾಯಿತು ಎಂದು ರೈಲ್ವೆ ಬಳಕೆದಾರರ ಸಲಹಾ ಸಮಿತಿ ಸದಸ್ಯ ಟಿ.ಜೆ.ಗಿರೀಶ್ ಸಭೆಯ ವಿವರ ನೀಡಿದ್ದಾರೆ.

ಸಚಿವ ವಿ.ಸೋಮಣ್ಣ ಅವರ ಕಾಳಜಿಯಿಂದಾಗಿ ತುಮಕೂರು ರೈಲ್ವೆ ನಿಲ್ದಾಣಕ್ಕೆ ಡಾ.ಶಿವಕುಮಾರ ಮಹಾಸ್ವಾಮಿಗಳ ಹೆಸರನ್ನು ಇಡುವ ಆಶಯ ಈಡೇರುತ್ತಿದೆ. ಜಿಲ್ಲೆಯಲ್ಲಿ ಸುಮಾರು 25 ರೈಲ್ವೆ ಅಂಡರ್ ಪಾಸ್ ಹಾಗೂ ಫ್ಲೈಓವರ್ ಕಾಮಗಾರಿ ವಿವಿಧ ಹಂತದಲ್ಲಿ ಪ್ರಗತಿಯಲ್ಲಿವೆ, ತುಮಕೂರು–ರಾಯದುರ್ಗ ರೈಲ ಕಾಮಗಾರಿಗೆ ವೇಗ ದೊರಕಿದೆ. ತುಮಕೂರು–ದಾವಣಗೆರೆ ಮಾರ್ಗದ ಕಾಮಗಾರಿಯನ್ನು ಅತಿ ಶೀಘ್ರವಾಗಿ ನಡೆಸಬೇಕು. ತುಮಕೂರು ರೈಲು ನಿಲ್ದಾಣದ ಕಾಮಗಾರಿ ಆರಂಭವಾಗಿದ್ದು, ತುಮಕೂರು–ಬೆಂಗಳೂರು ನಡುವೆ 4 ರೈಲ್ವೆ ಮಾರ್ಗಗಳಿಗೆ ಈಗಾಗಲೇ ಅನುಮತಿ ನೀಡಿರುವುದು ಸಂತೋಷದ ವಿಚಾರ. ತುಮಕೂರಿನಿಂದ ಬೆಂಗಳೂರಿಗೆ ಕಡೆ ಹಾಗೂ ತಿಪಟೂರು ಕಡೆ ಪ್ರತಿನಿತ್ಯ ಉದ್ಯೋಗ ವ್ಯಾಪಾರ ವ್ಯವಹಾರದ ನಿಮಿತ್ತ ಸಾವಿರಾರು ಜನರು ಸಂಚರಿಸುತ್ತಿದ್ದು ಅವರಿಗೆ ಅನುಕೂಲವಾಗುವಂತೆ ತುಮಕೂರು ರೈಲ್ವೆ ನಿಲ್ದಾಣಕ್ಕೆ ಕಾಮಗಾರಿ ಮುಗಿಯುವವರೆ ಗೂತಾತ್ಕಾಲಿಕ ಪಾರ್ಕಿಂಗ್ ವ್ಯವಸ್ಥೆಯನ್ನು ಕಲ್ಪಿಸಬೇಕು. ಯಶವಂತಪುರ ಮತ್ತು ಅರಸೀಕೆರೆ ನಡುವೆ ಸ್ವಯಂಚಾಲಿತ ಸಿಗ್ನಲ್ ಕಾಮಗಾರಿಆದಷ್ಟು ಬೇಗ ಪೂರ್ಣಗೊಳಿಸಿ ಕೊಡಬೇಕು. ತುಮಕೂರಿನಿಂದ ಶಿವಮೊಗ್ಗ ಕಡೆರಸ್ತೆಕಾಮಗಾರಿ ಪ್ರಗತಿಯಲ್ಲಿರುವುದರಿಂದ ಹೆಚ್ಚಿನರೈಲ್ವೆ ಸಂಚಾರದವ್ಯವಸ್ಥೆಯನ್ನು ಕಲ್ಪಿಸಿ ಕೊಡಬೇಕೆಂದು ಸಚಿವರಿಗೆ ಮನವಿ ಮಾಡಲಾಯಿತು ಎಂದು ಟಿ.ಜೆ.ಗಿರೀಶ್ ಹೇಳಿದರು.

ತುಮಕೂರು ಮತ್ತು ಸುತ್ತಮುತ್ತಲಿನ ಜಿಲ್ಲೆಗಳ ಸಾರ್ವಜನಿಕರ ಹಿತದೃಷ್ಟಿಯಿಂದ ನಾವು ರೈಲು ಸಂಖ್ಯೆ 19667 ಮತ್ತು 19668 ಮೈಸೂರು – ಉದಯಪುರ ಅರಮನೆರಾಣಿ ಹಮ್ ಸಫರ್ ಎಕ್ಸ್‌ಪ್ರೆಸ್‌ಗೆ ತುಮಕೂರಿನಲ್ಲಿ ನಿಲುಗಡೆ ನೀಡಲುಕೋರಲಾಯಿತು.ಪ್ರಸ್ತುತಕೆಎಸ್‌ಆರ್ ಬೆಂಗಳೂರು ನಂತರ, ರೈಲಿನ ವ್ಯವಸ್ಥೆಯನ್ನು ಕಲ್ಪಿಸಿಕೊಡಲು ವಿನಂತಿಸಲಾಯಿತು. ತುಮಕೂರಿನಿಂದ ಬೆಳಗ್ಗೆ ಮತ್ತು ಸಾಯಂಕಾಲ ಹೊರಡುವ ಮೆಮು ರೈಲು ಯಶವಂತಪುರದಲ್ಲಿ ಕೊನೆಯಾಗುತ್ತಿದ್ದು ಇದನ್ನು ಕೆಎಸ್‌ಆರ್‌ವರೆಗೆ ವಿಸ್ತರಿಸಬೇಕು. ಇದರಿಂದ ಉದ್ಯೋಗಸ್ಥರಿಗೆ ಮತ್ತುಇತರರಿಗೆ ಅನುಕೂಲವಾಗುತ್ತದೆ. ಚಿಕ್ಕಮಂಗಳೂರಿನಿಂದ ತಿರುಪತಿಗೆ ತುಮಕೂರು ಮುಖಾಂತರ ಹೋಗುವ ರೈಲನ್ನು ವಾರಕ್ಕೆ ಕನಿಷ್ಠ ಮೂರು ಬಾರಿ ಅಂದರೆ ಎರಡು ದಿನಕ್ಕೆ ಒಮ್ಮೆ ಓಡಿಸಬೇಕು, ಈಗ ಅದು ವಾರಕೆ ಒಂದು ಬಾರಿ ಮಾತ್ರ ಓಡುತ್ತಿದೆ ಇದರಿಂದ ಭಕ್ತಾದಿಗಳಿಗೆ ಅನುಕೂಲವಾಗುತ್ತದೆ. ಇನ್ನು ಕೆಲವು ಬೇಡಿಕೆಗಳು, ಸಲಹೆಗಳನ್ನು ಹಾಗೂ ಕುಂದು ಕೊರತೆಗಳನ್ನು ನಮ್ಮ ಜಿಲ್ಲೆಯಿಂದ ಪ್ರತಿನಿಧಿಸುತ್ತಿರುವ ರೈಲ್ವೆ ಬಳಕೆದಾರರ ಸಲಹಾ ಸಮಿತಿ ಸದಸ್ಯರು ಮನವಿ ಮಾಡಿದರು ಎಂದು ತಿಳಿಸಿದ್ದಾರೆ.

"ಒಳ ಮೀಸಲಾತಿ ಮಾದಿಗ ಸಮುದಾಯಕ್ಕೆ ಅನ್ಯಾಯ: ಸಮುದಾಯಕ್ಕೆ ವಿಷ ಕೊಟ್ಟಿದ್ದಾರೆ–ವೈ.ಎಚ್.ಹುಚ್ಚಯ್ಯ

ಸೂರ್ಯಪ್ರಗತಿನ್ಯೂಸ್.ಕಾಂ



ತಿಪಟೂರು, ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಒಳಮೀಸಲಾತಿ ಜಾರಿಯಲ್ಲಿ ಮಾದಿಗ ಸಮುದಾಯಕ್ಕೆ ಅನ್ಯಾಯ ಮಾಡಿ, ಇಡೀ ಸಮುದಾಯಕ್ಕೆ ವಿಷ ಕೊಟ್ಟಿದ್ದಾರೆ ಎಂದು ಜಿಪಂ ಮಾಜಿ ಅಧ್ಯಕ್ಷ ಹಾಗೂ ಮಾದಾರ ಮಹಾಸಭಾ ಜಿಲ್ಲಾಧ್ಯಕ್ಷ ವೈ.ಹೆಚ್.ಹುಚ್ಚಯ್ಯ ಆರೋಪಿಸಿದರು.

ನಗರದ ಪ್ರವಾಸಿ ಮಂದಿರದಲ್ಲಿ ಮಹಾಸಭಾದ ಸದಸ್ಯತ್ವ ನೋಂದಣಿ ಹಾಗೂ ಸಂಘಟನೆಯ ಚುರುಕುಗೊಳಿಸುವ ನಿಟ್ಟಿನಲ್ಲಿ ಹಮ್ಮಿಕೊಂಡಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಭಾರತದಂತಹ ದೊಡ್ಡ ದೇಶದಲ್ಲಿ ಶ್ರೇಣಿಕೃತ ಜಾತಿ ವ್ಯವಸ್ಥೆ ನಡೆ ಯುತ್ತಿದೆ ಈ ಶ್ರೇಣಿಕೃತ ವ್ಯವಸ್ಥೆಯಲ್ಲಿ ಕಟ್ಟ ಕಡೆಯ ಜಾತಿಯೆಂದರೆ ಮಾದಿಗ ಜಾತಿಯವರು 1976 ರಲ್ಲಿ ಕೇವಲ 6 ಜಾತಿಗಳು ಮಾತ್ರ ಇದ್ದಿದ್ದು ನಂತರದಲ್ಲಿ ರಾಜ ಕೀಯ ಕಾರಣಕ್ಕೆ 101 ಪರಿಶಿಷ್ಟ ಜಾತಿ ಗಳನ್ನು ಸೇರಿಸಿದರು. 1–8–2024 ರಂದು ಸುಪ್ರೀಂ ಕೋರ್ಟ್ ಒಳಮಿಸಲು ಮಾಡ ಬೇಕು ಎಂದು ತೀರ್ಪು ನೀಡಿದ್ದು ಆರ್ಥಿಕ ವಾಗಿ ಮತ್ತು ಶೈಕ್ಷಣಿಕವಾಗಿ ಹಿಂದುಳಿದ ವರಿಗೆ ಒಳ ಮೀಸಲಾತಿ ಪ್ರಕಟಿಸಬೇಕೆಂದು ತೀರ್ಪು ನೀಡಿದ್ದು ಆದರೆ ಅದನ್ನು ಗಾಳಿಗೆ ತೂರಿ ತಮಗೆ ಬೇಕಾದ ರೀತಿನಲ್ಲಿ ಒಳ ಮೀಸಲಾತಿ ಪ್ರಕಟಿಸಿರುವುದರಿಂದ ನಮ್ಮ ಪಾಲಿನ ಹಕ್ಕನ್ನು ಕಿತ್ತುಕೊಂಡಿರುವ ರಾಜಕೀಯ ನಾಯಕರಿಗೆ ಅವರ ಕ್ಷೇತ್ರಗಳಲ್ಲಿ ಮುಂದಿನ ದಿನಗಳಲ್ಲಿ ತಕ್ಕ ಪಾಠ ಕಲಿಸುವ ಕಾಲ ದೂರದಲ್ಲಿಲ್ಲ. ಮಾದಿಗ ಸಮಾಜ ತನ್ನ ಅಸ್ತಿತ್ವಕ್ಕಾಗಿ ಇನ್ನಷ್ಟು ಸಂಘಟಿತ ವಾಗಬೇಕು. ಪ್ರತಿಯೊಂದು ಗ್ರಾಮದಲ್ಲೂ ಸದಸ್ಯತ್ವ ನೋಂದಣಿ ಹೆಚ್ಚಿಸಬೇಕು. ನಮ್ಮ ರಾಜಕೀಯ ಪ್ರಾತಿನಿಧ್ಯಕ್ಕಾಗಿ ಸಂಘಟನೆ ಬಲಪಡಿಸುವುದು ಆಗತ್ಯ ಎಂದರು.

ಮಾದರ ಮಹಾಸಭಾ ತಾಲೂಕು ಅಧ್ಯಕ್ಷ ಎಂ ಶಾಂತಪ್ಪ ಮಾತನಾಡಿ, ನಮ್ಮ ತಾಲೂಕಿನಲ್ಲಿ ಒಳ ಮೀಸಲು ಹೋರಾಟ ಮಾದರ ಮಹಾಸಭಾದ ರಾಜ್ಯಾಧ್ಯಕ್ಷರು ಮತ್ತು ಜಿಲ್ಲಾಧ್ಯಕ್ಷರ ಅಪ್ಪಣೆಯ ಮೇರೆಗೆ ರಾಜ್ಯಮಟ್ಟದಲ್ಲಿ ಸದಸ್ಯತ್ವ ಅಂದೋಲನ ಮಾಡಿದ್ದೇವೆ ತಿಪಟೂರು ತಾಲೂಕು ಮಾದಾರ ಮಹಾಸಭಾ ಸದಸ್ಯತ್ವ ಚುರುಕಾಗಿ ನಡೆಯಬೇಕು ಎಂದು ಈ ಸಭೆ ನಡೆಸಿದ್ದೇವೆ. 224 ವಿಧಾನಸಭಾ ಕ್ಷೇತ್ರದಲ್ಲಿ ಒಂದೊಂದು ಕ್ಷೇತ್ರದಲ್ಲೂ 500ಕ್ಕೂ ಹೆಚ್ಚು ಸದಸ್ಯತ್ವ ಪಡೆಯಬೇಕು ಕನಿಷ್ಠ ನಮ್ಮ ತಾಲೂಕಿನಲ್ಲಿ ಒಂದು ಸಾವಿರಕ್ಕೂ ಹೆಚ್ಚು ಸದಸ್ಯರನ್ನು ಮಾಡಬೇಕು ಎಂದು ಇದೆ ವೇಳೆ ತಿಳಿಸಿದರು.

ಮಾದಾರ ಮಹಾಸಭಾ ಜಿಲ್ಲಾ ಕಾರ್ಯದರ್ಶಿ ಕೊಟ್ಟ ಶಂಕರ್ ಮಾತನಾಡಿ, ಮಾದಿಗ ಸಮಾಜ ಸಂಘಟಿತವಾಗಲು ಹಾಗೂ ಸವಲತ್ತುಗಳನ್ನು ಪಡೆಯಲು ಸದಸ್ಯತ್ವ ನೋಂದಣಿ ಅತ್ಯಗತ್ಯವಾಗಿದೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಮಾದಾರ ಮಹಾಸಭಾ ಜಿಲ್ಲಾ ಉಪಾಧ್ಯಕ್ಷ ಡಾ.ಮುಕುಂದರಾಜ್, ಜಿಲ್ಲಾ ವಿಶೇಷ ಆಹ್ವಾನಿತರಾದ ವೆಂಕಟರಾಮು, ರಾಘವೇಂದ್ರ ಯಗಚೀಕಟ್ಟೆ, ತಾ. ಉಪಾಧ್ಯಕ್ಷ ಕುಪ್ಪಾಳು ರಂಗಸ್ವಾಮಿ, ಬೆಸ್ಕಾಂ ನರಸಿಂಹ ಮೂರ್ತಿ, ಶಿವಕುಮಾರ್, ಚಂದ್ರ ಶೇಖರ್, ನೂತನ ಮಹಿಳಾ ಘಟಕದ ಅಧ್ಯಕ್ಷೆ ನಂದಿನಿ, ಮತ್ತು ನಗರ ಘಟಕದ ಅಧ್ಯಕ್ಷ ಬಾಲಾಜಿ ಸೇರಿದಂತೆ ಮಹಾಸಭಾ ಪದಾಧಿಕಾರಿಗಳು ಹಾಗೂ ಸಮುದಾಯದ ಮುಖಂಡರು ಹಾಜರಿದ್ದರು."

ಪುರುಷರ ಹ್ಯಾಂಡ್ ಬಾಲ್ ಪಂದ್ಯಾವಳಿಯಲ್ಲಿ ಸಿದ್ದಗಂಗಾ ಕಲಾ ವಿಜ್ಞಾನ ಮತ್ತು ವಾಣಿಜ್ಯ ಕಾಲೇಜಿನ ವಿದ್ಯಾರ್ಥಿಗಳಿಗೆ ಪ್ರಥಮ ಸ್ಥಾನ

ಸೂರ್ಯಪ್ರಗತಿನ್ಯೂಸ್.ಕಾಂ



ತುಮಕೂರು– ತುಮಕೂರು ವಿಶ್ವ ವಿದ್ಯಾನಿಲಯದ ವತಿಯಿಂದ ಆಯೋಜಿಸಿದ್ದ 2025–26ನೇ ಸಾಲಿನ ಅಂತರ ಕಾಲೇಜು ಪುರುಷರ ಹ್ಯಾಂಡ್ ಬಾಲ್ ಪಂದ್ಯಾವಳಿಯಲ್ಲಿ ನಗರದ ಶ್ರೀ ಸಿದ್ದಗಂಗಾ ಕಲಾ ವಿಜ್ಞಾನ ಮತ್ತು ವಾಣಿಜ್ಯ ಕಾಲೇಜಿನ ವಿದ್ಯಾರ್ಥಿಗಳು ಉತ್ತಮ ಪ್ರದರ್ಶನ ನೀಡಿ ಪ್ರಥಮ ಸ್ಥಾನ ಗಳಿಸಿದ್ದಾರೆ.

ತುಮಕೂರು ವಿವಿ ಮಟ್ಟದ ಪುರುಷರ ಹ್ಯಾಂಡ್ ಬಾಲ್ ಪಂದ್ಯಾವಳಿಯಲ್ಲಿ ಪ್ರಥಮ ಸ್ಥಾನ ಗಳಿಸಿರುವ ಶ್ರೀ ಸಿದ್ದಗಂಗಾ ಕಲಾ ವಿಜ್ಞಾನ ಮತ್ತು ವಾಣಿಜ್ಯ ಕಾಲೇಜಿನ ವಿದ್ಯಾರ್ಥಿಗಳನ್ನು ಪ್ರಾಂಶುಪಾಲರಾದ ಡಾ. ಟಿ.ಬಿ. ನಿಜಲಿಂಗಪ್ಪ, ಪದವಿ ಕಾಲೇಜುಗಳ ವ್ಯವಸ್ಥಾಪಕರಾದ ಗಂಗಣ್ಣ ಬಿ.ಜಿ., ಇತಿಹಾಸದ ವಿಭಾಗದ ಮುಖ್ಯಸ್ಥರಾದ ಡಾ. ಚಂದ್ರಶೇಖರಯ್ಯ ಬಿ.ಆರ್., ಎಂ.ಕಾಂ ವಿಭಾಗದ ಮುಖ್ಯಸ್ಥರಾದ ರತ್ನಮ್ಮ ವೈ.ಎಸ್., ವಾಣಿಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥರಾದ ನವ್ಯಾ ಎಸ್. ಮೂರ್ತಿ, ಸಮಾಜಶಾಸ್ತ್ರ ವಿಭಾಗದ ಮುಖ್ಯಸ್ಥರಾದ. ಡಾ. ರಂಗನಾಥ್, ಪ್ರಾಧ್ಯಾಪಕರುಗಳಾದ ಮಹೇಶ್ ಮುಸಿಗೇರಿಸ ಶ್ರೀವಲ್ಲಿ ಕೆ.ಎಲ್., ಡಾ. ಪ್ರವೀಣ ವಾಲ್ಮಿಕಿ, ದೈಹಿಕ ಶಿಕ್ಷಣ ನಿರ್ದೇಶಕರಾದ ಉದಯ್ ಕುಮಾರ್ ಎಂ. ಮತ್ತು ವಿಭಾಗದ ಸಹಾಯಕರಾದ ಮುಕುಂದಯ್ಯ, ಕಾಲೇಜಿನ ಆಡಳಿತ ಮಂಡಳಿ, ಬೋಧಕ, ಬೋಧಕೇತರ ಸಿಬ್ಬಂದಿ ಹಾಗೂ ಹಿರಿಯ ವಿದ್ಯಾರ್ಥಿಗಳ ಸಂಘದವರು ಅಭಿನಂದಿಸಿದ್ದಾರೆ.

EDITOR: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA PRINTED BY: T.S.KRISHNAMURTHY, ANJANADRI PRINTERS, 4th CROSS, VINAYAKA NAGARA, TUMAKURU-572101. KARNATAKA, PUBLISHED BY: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA. OWNED BY: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA PRNTED AT: ANJANADRI PRINTERS, 4th CROSS, VINAYAKA NAGARA, TUMAKURU-572101. KARNATAKA, PUBLISHED AT: TUMAKURU, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA. CONTACT: 9901010109 GMAIL: suryapragathi2021@gmail.com.